ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 191
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಬುಧವಾರ: 08–07–2026

# ಸಾಲ ಮನ್ನಾ: ಪರಿಶೀಲನೆ ಬಳಿಕ ನಿರ್ಧಾರ



**ಕಲ್ಬುರ್ಗಿ, ಜು. 7–** ರಾಜ್ಯದಲ್ಲಿ ರೈತರ ಸಾಲ ಮನ್ನಾ ಬೇಡಿಕೆ ಬಗ್ಗೆ ಪರಿಶೀಲಿಸಿ ಒಂದು ತೀರ್ಮಾನ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.
ಕಲ್ಬುರ್ಗಿಯಲ್ಲಿಂದು ಕಲ್ಬುರ್ಗಿ ವಿಭಾಗದ ಜಿಲ್ಲೆಗಳ ಪ್ರಗತಿ ಪರಿಶೀಲನೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಿಯ ಸಾಲ, ಯಾವ ಸಾಲ ಎಂಬುದನ್ನು ಪರಿಶೀಲನೆ ಮಾಡೋಣ ಎಂದರು.

ನೆರೆಯ ಮಹಾರಾಷ್ಟ್ರ, ತಮಿಳುನಾಡು ಮತ್ತಿತರ ರಾಜ್ಯಗಳಲ್ಲಿ ರೈತರ ಸಾಲ ಮನ್ನಾ ಮಾಡಲಾಗಿದೆ. ರಾಜ್ಯದಲ್ಲೂ ರೈತರ ಸಾಲ ಮನ್ನಾ ಮಾಡುವ ತೀರ್ಮಾನ ಮಾಡುತ್ತೀರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಸಾಲ ಮನ್ನಾ ಮಾಡುವ ಬಗ್ಗೆ ಖಚಿತವಾಗಿ ಏನನ್ನೂ ಹೇಳದೆ, ಯಾವ ಸಾಲ ಇದೆ, ಏನು ಸಾಲ ಇದೆ, ಎಲ್ಲಿ ಸಾಲ ಇದೆ ಎಲ್ಲವನ್ನು ನೋಡುತ್ತೇನೆ. ಮುಂದೆ ಸಾಲ ಮನ್ನಾದ ಬಗ್ಗೆ ಮಾತನಾಡುತ್ತೇನೆ ಎಂದಷ್ಟೇ ಉತ್ತರಿಸಿದರು.
ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ಕಾನೂನು ಚೌಕಟ್ಟಿನಲ್ಲೇ ಎಲ್ಲವನ್ನೂ ಮಾಡಲಾಗುವುದು. ರಾಜ್ಯದ ಎಲ್ಲ ಭಾಗಗಳ ಪರಿಸ್ಥಿತಿ ಪರಿಶೀಲಿಸಿ ನಂತರ ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲಾಗುವುದು ಎಂದರು.

ನಾನು ಬರಗಾಲ ಪರಿಸ್ಥಿತಿ ಅವಲೋಕಿಸಲು ಕಲ್ಯಾಣ ಕರ್ನಾಟಕಕ್ಕೆ ಬಂದಿದ್ದೇನೆ. ಇಲ್ಲನ ಜನರು ಮತ್ತು ಜನಪ್ರತಿನಿಧಿಗಳನ್ನು ಭೇಟಿ ಮಾಡಿದ್ದೇನೆ. ಇಲ್ಲಿಯ ಪರಿಸ್ಥಿತಿಯ ಅವಲೋಕನಕ್ಕೆ ಸಭೆ ನಡೆಸುತ್ತಿದ್ದೇನೆ. ಇನ್ನು ಎರಡು ದಿನ ಬಿಟ್ಟು ಬೆಳಗಾವಿಗೂ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯನ್ನು ಪರಾಮರ್ಶಿಸುತ್ತೇನೆ ಎಂದು ಹೇಳಿದರು.

ಜನರ ಸಮಸ್ಯೆಗಳನ್ನು ಆಲಿಸಿ ಬಹಗೆಹರಿಸಲು ಹೊಸದಾಗಿ ಪ್ರಜಾಸೇವಾ ಇಲಾಖೆ ಸ್ಥಾಪಿಸಿ ಸಚಿವರನ್ನು ನೇಮಕ ಮಾಡಿ ಜನರ ಅಹವಾಲುಗಳನ್ನು ಪರಿಶೀಲಿಸಿ ಅವರಿಗೆ ಸಾಧ್ಯವಾದಷ್ಟು ನ್ಯಾಯ ಒದಗಿಸುವ ಕೆಲಸವನ್ನು ಸರ್ಕಾರ ಮಾಡುತ್ತದೆ ಎಂದರು.
ಇದಕ್ಕೂ ಮೊದಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕಲಬುರಗಿಯ ಸರ್ಕಾರಿ ಅತಿಥಿ ಗೃಹದ ಆವರಣದಲ್ಲಿ ಸಾರ್ವಜನಿಕರಿಂದ ಅವಹಾಲುಗಳನ್ನು ಸ್ವೀಕರಿಸಿದ ಸಂದರ್ಭದವಲ್ಲಿ ಕೆಲ ರೈತರು, ಮಳೆ ಕೊರತೆ ಉಂಟಾಗಿದೆ, ಬರಗಾಲ ಪೀಡಿತ ಎಂದು ಘೋಷಣೆ ಮಾಡಿ ಎಂದು ಮನವಿ ಮಾಡಿದರು.
ಆಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಈ ಪರಿಸ್ಥಿತಿಯನ್ನು ಕಣ್ಣಾರೆ ನೋಡಲೆಂದೇ ನಾನು ಇಲ್ಲಿಗೆ ಬಂದಿದ್ದೇನೆ. ನಿಮ್ಮ ಪರಿಸ್ಥಿತಿ ನನಗೆ ಅರ್ಥವಾಗುತ್ತದೆ ಎಂದರು.
ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್, ಗೃಹ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್, ಕೆಕೆಆರ್‌ಡಿಬಿ ಅಧ್ಯಕ್ಷ ಹಾಗೂ ಶಾಸಕ ಅಜಯ್‌ಸಿಂಗ್, ಶಾಸಕ ಅಲ್ಲಮಪ್ರಭು ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು.

ಬರಪರಿಸ್ಥಿತಿ: ನಿರ್ಲಕ್ಷಿಸಿದರೆ ಕಠಿಣ ಕ್ರಮ 2ನೇಪುಟಕ್ಕೆ►

# ಎಸ್‌ಐಆರ್ ಪ್ರಕ್ರಿಯಲ್ಲಿ ಶೇ.83.68ರಷ್ಟು ಪ್ರಗತಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ

ಧೈರ್ಯದ ದಾರಿ



**ರಾಯಚೂರು ಜುಲೈ 07:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಭಾಗವಾಗಿ ಜುಲೈ 06ರ ಸೋಮವಾರ ಸಂಜೆ ವೇಳೆಗೆ ಜಿಲ್ಲಾದ್ಯಂತ ಇವರೆಗೆ 14,34,723 ಲಕ್ಷ ಮತದಾರರ ಗಣತಿ ನಮೂನೆಯನ್ನು ವಿತರಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 17,14,559 ಮತದಾರರ ಪೈಕಿ ಈವರೆಗೆ ಶೇ.83.68ರಷ್ಟು ಪ್ರಗತಿ ಸಾಧಿಸಲಾಗಿದೆ.
ಜಿಲ್ಲೆಯಲ್ಲಿ ಈವರೆಗೆ ವಿತರಿಸಲಾದ ಗಣತಿ ನಮೂನೆಗಳ ಪೈಕಿ 18.08 ಲಕ್ಷ ಮತದಾರರ ನಮೂನೆಗಳನ್ನು ಡಿಜಿಟಲೀಕರಿಸಲು ಸಾಧ್ಯವಾಗಿದೆ. 1,180 ಮತದಾರರು ಈವರೆಗೆ ಆನ್‌ಲೈನ್ ಮೂಲಕ ಗಣತಿ ನಮೂನೆಗಳನ್ನು ಭರ್ತಿ ಮಾಡಿದ್ದಾರೆ. ಸ್ಥಳದಲ್ಲಿ ಇಲ್ಲದ, ಬೇರೆ ವಿಳಾಸಕ್ಕೆ ಸ್ಥಳಾಂತರವಾದ, ಮೃತಪಟ್ಟ ಮತ್ತು ಎರಡು ಕಡೆ ನೋಂದಣಿಯಾದ ಒಟ್ಟು 3,898 ಮತದಾರರ ವಿವರ ಲಭ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದ ಪರಿಸ್ಥಿತಿ ಅವಲೋಕಿಸಿ ಬರಗಾಲ ಪೀಡಿತ ಪ್ರದೇಶ ಘೋಷಣೆ: ಸಿಎಂ ಡಿ ಕೆ ಶಿವಕುಮಾರ್



**ಕಲಬುರ್ಗಿ, ಜು.07:**"ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿ ನಂತರ ಘೋಷಣೆ ಮಾಡಲಾಗುವುದು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು. ಕಲಬುರಗಿ ಸರ್ಕಾರಿ ಅತಿಥಿ ಗೃಹದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಉತ್ತರಿಸಿದರು.

ಬರಗಾಲಕ್ಕೆ ಸಿಲುಕಿರುವ ಕಲ್ಯಾಣ ಕರ್ನಾಟಕದ ಭಾಗಕ್ಕೆ ಸರಕಾರದ ಕೊಡುಗೆ ಏನು ಎಂದು ಕೇಳಿದಾಗ, "ನಾನು ಬರಗಾಲ ಪರಿಸ್ಥಿತಿ ಅವಲೋಕಿಸಲು ಕಲ್ಯಾಣ ಕರ್ನಾಟಕ ಭಾಗಕ್ಕೆ ಬಂದಿದ್ದೇನೆ. ಇಲ್ಲಿನ ಜನರು ಮತ್ತು ಜನಪ್ರತಿನಿಧಿಗಳನ್ನು ಭೇಟಿ ಮಾಡಿದ್ದೇನೆ. ಇಲ್ಲಿನ ಪರಿಸ್ಥಿತಿಯ ಅವಲೋಕನಕ್ಕೆ ಸಭೆ ನಡೆಸುತ್ತಿದ್ದೇನೆ. ಅದೇ ರೀತಿ ಎರಡು ಮೂರು ದಿನ ಬಿಟ್ಟು ಬೆಳಗಾವಿಗೂ ಭೇಟಿ ನೀಡುತ್ತಿದ್ದೇನೆ" ಎಂದರು.

"ಸಮಸ್ಯೆ ಬಗೆಹರಿಸಬೇಕು ಎಂದು ಜನರು 2ನೇಪುಟಕ್ಕೆ

# ಸಿರವಾರ: ರಸ್ತೆ ಬದಿ ತ್ಯಾಜ್ಯ ಸುಡುತ್ತಿರುವ ಆಡಳಿತ ವರ್ಗ; ಉಸಿರುಗಟ್ಟಿದ ಜನಸಾಮಾನ್ಯರು: ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷರ ಆಕ್ರೋಶ

ಧೈರ್ಯದ ದಾರಿ

**ಸಿರವಾರ:** ಪಟ್ಟಣದ ವಿಆರ್‌ಎಸ್ (VRS) ಶಾಲೆಯ ಸಮೀಪವಿರುವ ಲಿಂಗಸಗೂರು–ರಾಯಚೂರು ಮುಖ್ಯ ರಸ್ತೆಯ ಅಕ್ಕಪಕ್ಕದಲ್ಲಿ ಆಡಳಿತ ವರ್ಗವೇ ಘನತ್ಯಾಜ್ಯವನ್ನು ಸುಡುತ್ತಿರುವುದು ಸ್ಥಳೀಯರು ಹಾಗೂ ಪ್ರಯಾಣಿಕರ ಪಾಲಿಗೆ ಸಾವಿನ ಆಹ್ವಾನವಾಗಿ ಪರಿಣಮಿಸಿದೆ.
ಕಸಕ್ಕೆ ಬೆಂಕಿ ಹಚ್ಚಿದ ಪರಿಣಾಮ ಇಡೀ ರಸ್ತೆಯು ದಟ್ಟ ಹೊಗೆಯಿಂದ ಆವೃತವಾಗುತ್ತಿದ್ದು, ಸಂಚಾರಕ್ಕೆ ಭಾರೀ ಅಡಚಣೆಯಾಗುತ್ತಿದೆ. ದಟ್ಟ ಹೊಗೆಯಿಂದಾಗಿ ಬಸ್, ಲಾರಿ, ಕಾರು, ಬೈಕ್ ಸೇರಿದಂತೆ ವಿವಿಧ ವಾಹನ ಸವಾರರು ಎದುರಿನ ವಾಹನಗಳು ಕಾಣದಂತಾಗಿ ಲೈಟ್ ಹಾಕಿಕೊಂಡು, ಹಾರ್ನ್ ಮೊಳಗಿಸುತ್ತಾ ಜೀವ ಕೈಯಲ್ಲಿ ಹಿಡಿದು ಸಂಚರಿಸುವ ದುಸ್ಥಿತಿ ನಿರ್ಮಾಣವಾಗಿದೆ.
**ಸಾರ್ವಜನಿಕರ ಪರದಾಟ:** ಈ ದಟ್ಟ ಹೊಗೆಯು ಅರ್ಧ ಕಿಲೋಮೀಟರ್‌ವರೆಗೂ ಹರಡುತ್ತಿದ್ದು, ಸುತ್ತಮುತ್ತಲಿನ ಅಂಗಡಿ ಮಾಲೀಕರು ಮತ್ತು ನಿವಾಸಿಗಳು ತೀವ್ರ ಉಸಿರಾಟದ ಸಮಸ್ಯೆಯಿಂದಾಗಿ ಮನೆ ಹಾಗೂ ಅಂಗಡಿಗಳನ್ನು ತೊರೆದು





ಓಡುವಂತಾಗಿದೆ. ಶಾಲಾ ಮಕ್ಕಳು, ಹಳ್ಳಿಯಿಂದ ಬರುವ ಜನಸಾಮಾನ್ಯರು, ದಾರಿಹೋಕರು ಮೂಗು ಮುಚ್ಚಿಕೊಂಡು ಉಸಿರು ಬಿಗಿಹಿಡಿದು ಸಂಚರಿಸುತ್ತಿದ್ದಾರೆ. ಇಡೀ ರಸ್ತೆ ಸಾವಿನ ಹಾಸಿಗೆಯಂತಾಗಿದ್ದು, ಯಾವುದೇ ಕ್ಷಣದಲ್ಲಿ ಭೀಕರ ಅಪಘಾತ ಸಂಭವಿಸುವ ಆತಂಕ ಉಂಟಾಗಿದೆ.
**ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ:** ಈ ಭೀಕರ ಪರಿಸ್ಥಿತಿ ಜನರ ಕಣ್ಣಿಗೆ ಕಾಣುತ್ತಿದ್ದರೂ, ಸಿರವಾರದ ಅಧಿಕಾರಿಗಳು ಮಾತ್ರ ಕ್ಯಾರೆ ಎನ್ನದೆ ಕಚೇರಿಗಳಲ್ಲಿ ಆರಾಮಾಗಿ ಕುಳಿತಿದ್ದಾರೆ. ಜನರ ಜೀವದ ಜೊತೆ ಚೆಲ್ಲಾಟವಾಡುತ್ತಿರುವ ಅಧಿಕಾರಿಗಳ ವರ್ತನೆಗೆ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.
ಈ ಕುರಿತು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ತಾಲೂಕು ಅಧ್ಯಕ್ಷರಾದ ರಾಘವೇಂದ್ರ ಖಾಜನಗೌಡ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, "ಮುಗ್ಧ ಜನರ ಪ್ರಾಣದ ಜೊತೆ ಆಟವಾಡುತ್ತಿರುವ ಇಂತಹ ಕಾಮನ್ ಸೆನ್ಸ್ ಇಲ್ಲದ ಅಧಿಕಾರಿಗಳ ನಡೆಯನ್ನು 'ಥರ್ಡ್ ಕ್ಲಾಸ್' ಅನ್ನದೇ ಇನ್ನೇನು ಹೇಳಬೇಕು? ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತುಕೊಂಡು, ಈ ಕೂಡಲೇ ತ್ಯಾಜ್ಯ ವಿಲೇವಾರಿ ಕ್ರಮವನ್ನು ನಿಲ್ಲಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು," ಎಂದು ಆಗ್ರಹಿಸಿದ್ದಾರೆ.

# ಸಿರವಾರ: ವಾರ್ಡ್ ನಂ. 6ರ ಹೈಟೆಕ್ ಶೌಚಾಲಯ ಅವ್ಯವಸ್ಥೆ; ದುರ್ನಾತದಿಂದ ಸಾರ್ವಜನಿಕರ ಪರದಾಟ!



ಧೈರ್ಯದ ದಾರಿ

**ಸಿರವಾರ:**ಸಿರವಾರ ಪಟ್ಟಣ ಪಂಚಾಯತ್ ವ್ಯಾಪ್ತಿಯ ವಾರ್ಡ್ ನಂಬರ್ 6ರಲ್ಲಿ ನಿರ್ಮಿಸಲಾಗಿರುವ ಮಹಿಳೆಯರ ಹೈಟೆಕ್ ಶೌಚಾಲಯ, ಇದೀಗ ಸಾರ್ವಜನಿಕರಿಗೆ ವರದಾನವಾಗುವ ಬದಲು ತಲೆನೋವಾಗಿ ಪರಿಣಮಿಸಿದೆ. ಶೌಚಾಲಯಕ್ಕೆ ಸೂಕ್ತವಾದ 'ಸೆಪ್ಟಿಕ್ ಟ್ಯಾಂಕ್' (Septic Tank) ನಿರ್ಮಿಸದೇ ಇರುವುದರಿಂದ, ಕಲುಷಿತ ನೀರು ಮತ್ತು ತ್ಯಾಜ್ಯ ನೇರವಾಗಿ ಮುಖ್ಯ ಚರಂಡಿಗೆ ಹರಿಯುತ್ತಿದ್ದು, ಸ್ಥಳೀಯರು ತೀವ್ರ ಸಂಕಷ್ಟ ಅನುಭವಿಸುವಂತಾಗಿದೆ.
**ಸಮಸ್ಯೆಯ ಗಂಭೀರತೆ:**
**ದುರ್ನಾತದ ಕಾಟ:** ಶೌಚಾಲಯದ ತ್ಯಾಜ್ಯವು ಮುಖ್ಯ ಚರಂಡಿ ಮೂಲಕ ರಸ್ತೆಯುದ್ದಕ್ಕೂ ಹರಿಯುತ್ತಿದ್ದು, ಭರಿಸಲಾರದಷ್ಟು ದುರ್ನಾತ ಬೀರುತ್ತಿದೆ. ಇದರಿಂದಾಗಿ ಸದರಿ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರು, ಶಾಲಾ ಮಕ್ಕಳು ಮತ್ತು ಮಹಿಳೆಯರು ಮೂಗು ಮುಚ್ಚಿಕೊಂಡು ಓಡಾಡುವ ದುಸ್ಥಿತಿ ನಿರ್ಮಾಣವಾಗಿದೆ.
**ಆರೋಗ್ಯದ ಮೇಲೆ ದುಷ್ಪರಿಣಾಮ:** ಬಯಲಿನಲ್ಲಿ ಹರಿಯುತ್ತಿರುವ ತ್ಯಾಜ್ಯದಿಂದ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ಮಳೆಗಾಲದಲ್ಲಿ ಈ ಸಮಸ್ಯೆ ಮತ್ತಷ್ಟು ಉಲ್ಬಣಿಸುವ ಸಾಧ್ಯತೆಯಿದ್ದು, ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ಸ್ಥಳೀಯರು ಬದುಕುತ್ತಿದ್ದಾರೆ.
**ಅಧಿಕಾರಿಗಳ ನಿರ್ಲಕ್ಷ್ಯ:** "ಹೈಟೆಕ್" ಹೆಸರಿನಲ್ಲಿ ಸುಸಜ್ಜಿತ ಕಟ್ಟಡ ನಿರ್ಮಿಸಿದರೂ, ಮೂಲಭೂತ ಅವಶ್ಯಕತೆಯಾದ ತ್ಯಾಜ್ಯ ವಿಲೇವಾರಿ ವ್ಯವಸ್ಥೆಯನ್ನು (ಸೆಪ್ಟಿಕ್ ಟ್ಯಾಂಕ್) ಕಲ್ಪಿಸದಿರುವುದು ಪಟ್ಟಣ ಪಂಚಾಯತ್ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಸ್ಥಳೀಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.
**ಸಾರ್ವಜನಿಕರ ಆಗ್ರಹ:** ಪಟ್ಟಣ ಪಂಚಾಯತ್ ಆಡಳಿತ ಮಂಡಳಿ ಮತ್ತು ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು, ತಕ್ಷಣವೇ ವೈಜ್ಞಾನಿಕ ರೀತಿಯಲ್ಲಿ ಸೆಪ್ಟಿಕ್ ಟ್ಯಾಂಕ್ ನಿರ್ಮಾಣ ಮಾಡಬೇಕು. ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಕೂಡಲೇ ಈ ಸಮಸ್ಯೆಯನ್ನು ಬಗೆಹರಿಸದಿದ್ದರೆ,
**ಎಸ್ಟಿಮೇಟ್ ಉಲ್ಲಂಘನೆ:** "ಸರ್ಕಾರ ಮಂಜೂರು ಮಾಡಿರುವ ಅಂದಾಜು ಪಟ್ಟಿ (ಇಣುಟಚಿಣಜ ಅಂಠಿಥಿ) ಪ್ರಕಾರ ಕಾಮಗಾರಿ ನಡೆದಿಲ್ಲ. ಕೇವಲ ಹಣ ಲಪಟಾಯಿಸುವ ಉದ್ದೇಶದಿಂದ ಕಳಪೆ ಮಟ್ಟದ ಮತ್ತು ಅಪೂರ್ಣ ಕಾಮಗಾರಿಯನ್ನು ಮಾಡಲಾಗಿದೆ" ಎಂದು ಮೌನೇಶ್ ಪಿತಗಲ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಅರ್ಹ ಮತದಾರರು ಮತದಾರರ ಪಟ್ಟಿಯಿಂದ ವಂಚಿತರಾಗದಂತೆ ಅಗತ್ಯ ಮಾಹಿತಿ ನೀಡಿ: ಭೀಮರಾಯ ಬಿ.ರಾಮಸಮುದ್ರ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದಲ್ಲಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಭಾರತ ಚುನಾವಣೆ ಅಯೋಗದ ನಿರ್ದೇಶನದಂತೆ 55–ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಮನೆ.ಮನೆ ಸಮೀಕ್ಷೆ ಕಾರ್ಯವು ಪ್ರಗತಿಯಲ್ಲಿದು ಕ್ಷೇತ್ರದಲ್ಲಿನ 276 ಭಾಗಗಳಿಗೆ 276 ಬಿ.ಎಲ್.ಓ.ಗಳನ್ನು ನೇಮಕ ಮಾಡಿ ಅಗತ್ಯ ತರಬೇತಿಯನ್ನು ನೀಡಲಾಗಿದೆ, ಕ್ಷೇತ್ರದಲ್ಲಿ ಒಟ್ಟು 2,45,968 ಪೂರ್ವಕರಡು ಮತದಾರರಿದ್ದು ಎಲ್ಲಾ ಮತದಾರರ ಮನೆ.ಮನೆ ಸಮೀಕ್ಷೆಗಾಗಿ 2,45,968 ಎನ್ಯುಮರೇಷನ್ ಫಾರ್ಮಗಳನ್ನು ಮುದ್ರಿಸಲಾಗಿದೆ. 1.93.924 ಎನ್ಯುಮರೇಷನ್ ಫಾರ್ಮಗಳನ್ನು ವಿತರಿಸಲಾಗಿದೆ. ಅವುಗಳಲ್ಲಿ 52.601 ಎನ್ಯುಮರೇಷನ್ ಫಾರ್ಮಗಳನ್ನು ಡಿಜಟಲೀಕರಣಗೊಳಿಸಲಾಗಿದು ಉಳಿದ 1,92,960 ಫಾರ್ಮಗಳನ್ನು ಗಣಕಿಕರಣಗೊಳಿಸುವ ಕಾರ್ಯ ಪ್ರಗತಿಯಲ್ಲಿದೆ. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ವಂಚಿತರಾಗದಂತೆ ಮತದಾರರು ತಮ್ಮ ಮನೆಗಳಿಗೆ ಬರುವ ಬಿ.ಎಲ್.ಒ.ಗಳಿಗೆ ಅಗತ್ಯ ಮಾಹಿತಿಯನ್ನು ನೀಡಿ ಸಹಕಾರಿಸಬೇಕು ಎಂದು ಕೋರಿದ್ದಾರೆ.

# ಆಹಾರ ಇಲಾಖೆ ಎಂಡಿ ಜಗದೀಶ್ ಮನೆ ಮೇಲೆ ಲೋಕಾ ದಾಳಿ

**ಬೆಂಗಳೂರು,ಜು.7–**ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ವ್ಯವಸ್ಥಾಪಕ ನಿರ್ದೇಶಕ(ಎಂಡಿ) ಜಗದೀಶ್ ಅವರ ಕಚೇರಿ ಮನೆ ಸೇರಿ,7 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.

ಜಗದೀಶ್ ಅವರ ಕಾವೇರಿ ಭವನದ ಕಚೇರಿ,ನಾಲ್ಕು ಮನೆಗಳು,ಯಲಹಂಕ, ದೇವನಹಳ್ಳಿ ತಹಶೀಲ್ದಾರ್ ಕಚೇರಿ ಸೇರಿ 7 ಕಡೆಗಳಲ್ಲಿ ದಾಳಿ ನಡೆಸಿ ಶೋಧ ಕೈಗೊಳ್ಳಲಾಗಿದೆ.

ಹಿಂದೆ ನಗರದಲ್ಲಿ ವಿಶೇಷ ಜಿಲ್ಲಾಧಿಕಾರಿಯಾಗಿದ್ದ ಜಗದೀಶ್ ಯಲಹಂಕದಲ್ಲಿ ಅನಧಿಕೃತ ವ್ಯಕ್ತಿಗಳಿಗೆ ಜಮೀನು ನೀಡಿದ್ದ ಆರೋಪ ಕೇಳಿಬಂದಿತ್ತು.
2023 ರಲ್ಲಿ 9 ಹಾಗೂ 2 ಜಮೀನನ್ನು ಅನಧಿಕೃತವಾಗಿ ನೀಡಿದ ಆರೋಪ ಕೇಳಿ ಬಂದಿದೆ. ಈ ಸಂಬಂಧ ದಾಖಲಾಗಿತ್ತು.




ಈ ಹಿನ್ನೆಲೆಯಲ್ಲಿ ಜಗದೀಶ್ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ.

ಯಲಹಂಕ ಭಾಗದ 9 ಎಕರೆ ಹಾಗೂ 2 ಎಕರೆ ಖಾಸಗಿಯುವರಿಗೆ ಪರಭಾರೆ ಮಾಡಿರುವ ಸಂಬಂಧ ಲೋಕಾಯುಕ್ತ ಎಸ್ಪಿ ಶಿವಪ್ರಕಾಶ್ ದೇವರಾಜ್ ನೇತೃತ್ವದಲ್ಲಿ ದಾಳಿ ನಡೆಸಿ ಪರಿಶೀಲನೆ ಕೈಗೊಳ್ಳಲಾಗಿದೆ.

ಮೊದಲನೇ ಪುಟದಿಂದ

# ಸಾಲ ಮನ್ನಾ: ಪರಿಶೀಲನೆ ಬಳಿಕ ನಿರ್ಧಾರ

ರಾಜ್ಯವನ್ನು ಕಾಡುತ್ತಿರುವ ಬರಗಾಲ ಪರಿಸ್ಥಿತಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಎಚ್ಚರಿಕೆ ನೀಡಿದ್ದಾರೆ.

ಕಲ್ಬುರ್ಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಇಂದು ಪ್ರಸ್ತಾವಿಕ ಭಾಷಣ ಮಾಡಿದ ಸಿಎಂ ಅವರು, ಜನಪರ ಕೆಲಸ ಮಾಡದ ಅಧಿಕಾರಿಗಳನ್ನು ಸಹಿಸಿಕೊಳ್ಳುವುದಿಲ್ಲ ಎಂದರು.

ಉತ್ತರ ಕರ್ನಾಟಕದ ಮೊದಲ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಕಲಬುರಗಿಯಲ್ಲಿ ಆಯೋಜಿಸಲಾಗಿತ್ತು.

ಸರ್ವರನ್ನೂ ಒಳಗೊಂಡ ಪರಿಶುದ್ಧ ಆಡಳಿತ, ಅಭಿವೃದ್ಧಿ ಮತ್ತು ಕಟ್ಟಕಡೆಯ ವ್ಯಕ್ತಿಗೂ ಅವರ ನಾಗರಿಕ ಹಕ್ಕುಗಳನ್ನು ತಲುಪಿಸುವುದು ನನ್ನ ಸರ್ಕಾರದ ಪ್ರಮುಖ ಗುರಿ. ಈ ಗುರಿ ಸಾಧಿಸಲು ಅಧಿಕಾರಿ ವರ್ಗ ಅತ್ಯಂತ ಕ್ರಿಯಾಶೀಲ, ಜನಪರ ಮತ್ತು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು" ಎಂದು ತಿಳಿಸಿದರು.

ನಾನು ಬಸವಾದಿ ಶರಣರ ಸಮಾನತೆಯ ತತ್ವವನ್ನು ನಂಬುವವನು. ಆದ್ದರಿಂದಲೇ ನನ್ನ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಕಲ್ಯಾಣದಿಂದ ಆರಂಭಿಸಿದ್ದೇನೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಒಂದೇ ವೇಗದಲ್ಲಿ ಸಾಗಬೇಕು" ಎಂದು ಹೇಳಿದರು.

ಬೀದರ್, ಕಲ್ಬುರ್ಗಿ ಜಿಲ್ಲೆಯ ಜನತೆ ನೀಡಿರುವ ಅಭೂತಪೂರ್ವ ಬೆಂಬಲ, ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, "ಜನತೆ ನಮ್ಮ ಮೇಲೆ ಇಟ್ಟಿರುವ ನಂಬಿಕೆಯೇ ನಮ್ಮ ಜವಾಬ್ದಾರಿಯನ್ನು ಹೆಚ್ಚಿಸಿದೆ. ನಮ್ಮನ್ನು ಈ ಸ್ಥಾನದಲ್ಲಿ ಕೂರಿಸಿರುವವ ಜನತೆಯ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವುದು ನಮ್ಮೆಲ್ಲರ ಕರ್ತವ್ಯ" ಎಂದರು.

ಆಡಳಿತದ ಅನುಭವವನ್ನು ಹಂಚಿಕೊಂಡ ಅವರು, "ನಾನು ತಾಲ್ಲೂಕು ಪಂಚಾಯಿತಿ ಅಧ್ಯಕ್ಷನಾಗಿ ಕೆಲಸ ಆರಂಭಿಸಿ ಮುಖ್ಯಮಂತ್ರಿ ಹುದ್ದೆಯವರೆಗೆ ಎಲ್ಲಾ ಹಂತಗಳನ್ನು ದಾಟಿಕೊಂಡು ಬಂದಿದ್ದೇನೆ. ಹೀಗಾಗಿ ಆಡಳಿತದ ಪ್ರತಿಯೊಂದು ಹಂತದಲ್ಲಿ ಏನು ನಡೆಯುತ್ತದೆ ಎಂಬುದು ನನಗೆ ಚೆನ್ನಾಗಿ ಗೊತ್ತಿದೆ. ಅಭಿವೃದ್ಧಿ ವಿಚಾರದಲ್ಲಿ ಯಾವುದೇ ನೆಪಗಳನ್ನು ಕೇಳಲು ನಾನು ಸಿದ್ಧನಿಲ್ಲ. ನನಗೆ ಫಲಿತಾಂಶವೇ ಮುಖ್ಯ" ಎಂದು ಅಧಿಕಾರಿಗಳಿಗೆ ಸ್ಪಷ್ಟ ಸಂದೇಶ ನೀಡಿದರು.

"ನಿಮ್ಮ ಕಾರ್ಯಕ್ಷಮತೆ ಉತ್ತಮವಾಗಿದ್ದರೆ ನಾಡಿನ ಜನತೆಯ ಋಣ ತೀರಿಸಿದಂತಾಗುತ್ತದೆ. ಆದರೆ ಜನಪರವಾಗಿ ಕೆಲಸ ಮಾಡದಿದ್ದರೆ,ಲ್ ನಿಮ್ಮ ವಿರುದ್ಧ ಕ್ರಮ ಕೈಗೊಳ್ಳುವುದು ನನಗೆ ಅನಿವಾರ್ಯವಾಗುತ್ತದೆ" ಎಂದು ಅವರು ಎಚ್ಚರಿಕೆ ನೀಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಮಾತನಾಡಿದ ಮುಖ್ಯಮಂತ್ರಿಯವರು, "ಒಬ್ಬನೇ ಒಬ್ಬ ಅರ್ಹ ಮತದಾರ ತನ್ನ ಮತದಾನದ ಹಕ್ಕು ಕಳೆದುಕೊಳ್ಳಬಾರದು. ಇಲ್ಲಿ ರಾಜಕಾರಣ ಮುಖ್ಯವಲ್ಲ, ಆದರೆ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕು ರಕ್ಷಿಸುವುದು ಸರ್ಕಾರದ ಜವಾಬ್ದಾರಿ. ಬಿಎಲ್‌ಒಗಳು ಪ್ರತಿಯೊಂದು ಮನೆಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ ಅರ್ಹ ಮತದಾರರ ಹೆಸರನ್ನು ಉಳಿಸುತ್ತಾರೆಯೇ ಎಂಬುದರ ಮೇಲೆ ನಿಗಾ ವಹಿಸಬೇಕು. ಈ ವಿಚಾರದಲ್ಲಿ ಯಾವುದೇ ರಾಜಿ ಪ್ರಶ್ನೆಯೇ ಇಲ್ಲ" ಎಂದು ಸೂಚಿಸಿದರು.

ರಾಜ್ಯದ ಅಭಿವೃದ್ಧಿ ಮತ್ತು ನೀರಿನ ನಿರ್ವಹಣೆ ಕುರಿತು ಮಾತನಾಡಿದ ಅವರು, "ದೇಶಾದ್ಯಂತ ಮಳೆಯ ಅಭಾವದ ಬಗ್ಗೆ ಆತಂಕ ವ್ಯಕ್ತವಾಗುತ್ತಿದೆ. ರಾಜ್ಯದ ಪರಿಸ್ಥಿತಿ ಸಮಾಧಾನಕರವಾಗಿದೆ. ಅಂತರರಾಜ್ಯ ನೀರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ತೆಲಂಗಾಣ ಮತ್ತು ಆಂಧ್ರ ಪ್ರದೇಶದ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರೊಂದಿಗೆ ಐತಿಹಾಸಿಕ ಮಟ್ಟದ ಚರ್ಚೆ ನಡೆಸಿದ್ದೇವೆ. ಕೃಷ್ಣ, ಕಾವೇರಿ ಮತ್ತು ಗೋದಾವರಿ ನದಿಗಳ ಜೋಡಣೆ ಯೋಜನೆಯನ್ನು ಸುಮಾರು ಒಂದು ಲಕ್ಷ ಕೋಟಿ ರೂಪಾಯಿ ವೆಚ್ಚದಲ್ಲಿ ಮುಂದುವರಿಸುವ ಪ್ರಸ್ತಾವನೆಗೆ ಕೇಂದ್ರ ಸರ್ಕಾರವೂ ಸಕಾರಾತ್ಮಕ ಸ್ಪಂದನೆ ನೀಡಿದೆ. ರಾಜಕೀಯ ಭಿನ್ನಾಭಿಪ್ರಾಯಗಳನ್ನು ಮೀರಿ ರಾಜ್ಯದ ಜನರ ಹಿತಾಸಕ್ತಿ ರಕ್ಷಣೆ ಆದ್ಯತೆಯಾಗಿಸಿ ಒಟ್ಟಾಗಿ ಕೆಲಸ ಮಾಡಲು ತೀರ್ಮಾನಿಸಿದ್ದೇವೆ" ಎಂದರು.

ಹಿಂದಿನ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಸ್ಪಷ್ಟನೆ ನೀಡಿದ ಮುಖ್ಯಮಂತ್ರಿಯವರು, ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರದ ಅವಧಿಯಲ್ಲಿ ಆರಂಭಗೊಂಡಿರುವ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಯಥಾವತ್ತಾಗಿ ಮುಂದುವರಿಯಲಿವೆ. ಅಭಿವೃದ್ಧಿಯ ವೇಗವನ್ನು ಹೆಚ್ಚಿಸುವುದರ ಜೊತೆಗೆ ಆಡಳಿತದಲ್ಲಿ ಇನ್ನಷ್ಟು ಪಾರದರ್ಶಕತೆ, ಕಾರ್ಯಕ್ಷಮತೆ ಮತ್ತು ಜನಕೇಂದ್ರಿತ ದೃಷ್ಟಿಕೋನಕ್ಕೆ ಆದ್ಯತೆ ನೀಡಲಾಗುವುದು" ಎಂದರು.

# ರಾಜ್ಯದ ಪರಿಸ್ಥಿತಿ ಅವಲೋಕಿಸಿ ಬರಗಾಲ ಪೀಡಿತ ಪ್ರದೇಶ ಘೋಷಣೆ: ಸಿಎಂ ಡಿ ಕೆ ಶಿವಕುಮಾರ್

ಬೇಡಿಕೆಗಳನ್ನು ಮಂಡಿಸಿದ್ದಾರೆ. ಅವರ ಸಮಸ್ಯೆ ಆಲಿಸಲು ಹೊಸದಾಗಿ ಪ್ರಜಾಸೇವಾ ಇಲಾಖೆ ಸ್ಥಾಪಿಸಿ, ಸಚಿವರನ್ನು ನೇಮಕ ಮಾಡಿ, ಜನರ ಅರ್ಜಿಗಳನ್ನು ಪರಿಶೀಲಿಸಿ ಅವರಿಗೆ ಸಾಧ್ಯವಾದಷ್ಟು ನ್ಯಾಯ ಒದಗಿಸುವ ಕೆಲಸವನ್ನು ಸರ್ಕಾರ ಮಾಡುತ್ತದೆ" ಎಂದರು.

ಇದಕ್ಕೂ ಮೊದಲು ಮುಖ್ಯಮಂತ್ರಿಯವರು ಕಲಬುರ್ಗಿ ಸರಕಾರಿ ಅತಿಥಿ ಗೃಹದ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ರೈತರು ಕಬ್ಬಿನ ಜಲ್ಲೆ ಜತೆಗೆ ತಮ್ಮ ಅಹವಾಲುಗಳನ್ನು ನೀಡಿದರು. ಮಳೆ ಕೊರತೆ ಉಂಟಾಗಿದೆ, ಬರಗಾಲ ಪೀಡಿತ ಎಂದು ಘೋಷಣೆ ಮಾಡಿ ಎಂದು ರೈತರು ಮನವಿ ಮಾಡಿದರು. "ಈ ಪರಿಸ್ಥಿತಿಯನ್ನು ಕಣ್ಣಾರೆ ನೋಡಲೆಂದೇ ನಾನು ಇಲ್ಲಿಗೆ ಬಂದಿದ್ದೇನೆ. ನಿಮ್ಮ ಪರಿಸ್ಥಿತಿ ನನಗೆ ಅರ್ಥವಾಗುತ್ತದೆ" ಎಂದರು.

ರೈತರ ಸಾಲ ಮನ್ನಾ ವಿಚಾರ ಹಾಗೂ ತಮಿಳುನಾಡು, ಮಹಾರಾಷ್ಟಗಳಲ್ಲಿ ರೈತರ ಸಾಲ ಮನ್ನಾ ಮಾಡಿರುವ ಬಗ್ಗೆ ಕೇಳಿದಾಗ, "ಎಲ್ಲಿಯ ಸಾಲ, ಯಾವ ಸಾಲ ಎಂಬುದನ್ನು ಪರಿಶೀಲನೆ ಮಾಡೋಣ" ಎಂದರು.

# ಬಿಡಿಎಯಿಂದ 60 ಕೋಟಿ ಸ್ವತ್ತು ವಶ



**ಬೆಂಗಳೂರು, ಜು. 7–** ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಹೆರೋಹಳ್ಳಿ ಗ್ರಾಮದ ಸರ್ವೆ ನಂಬರ್ 37/1P ಮತ್ತು 40/1 ರಲ್ಲಿನ ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಮಾಗಡಿ ರಸ್ತೆಯಿಂದ ಸರ್ ಎಂ ವಿಶ್ವೇಶ್ವರಯ್ಯ ಬಡಾವಣೆಗೆ ಸಂಪರ್ಕಿಸಲು 45.00 ಮೀ ಅಗಲದ ರಸ್ತೆ ನಿರ್ಮಾಣಕ್ಕಾಗಿ ಭೂಸ್ವಾದೀನ ಪಡಿಸಿಕೊಂಡಿದ್ದು ಈಗಾಗಲೇ ರಸ್ತೆ ಕಾಮಗಾರಿಯು ಬಹುತೇಕ ಮುಕ್ತಾಯವಾಗಿದ್ದು, ಮಾಗಡಿ ರಸ್ತೆ ಜಂಕ್ಷನ್ ಬಳಿ ಸುಮಾರು 28 ಗುಂಟೆ ಪ್ರದೇಶದಲ್ಲಿ ಅನಧಿಕೃತವಾಗಿ ಶೆಡ್ ಗಳನ್ನು ತೆರವುಗೊಳಿಸಿ ರಸ್ತೆ ಸಂಪರ್ಕವನ್ನು ಮುಂದುವರೆಸಲು ಪ್ರಾಧಿಕಾರದ ಸುಪರ್ದಿಗೆ ಪಡೆಯಲಾಯಿತು. ಮುಂದುವರೆದು ಸದರಿ ಸಂಪರ್ಕ ರಸ್ತೆಯ ಕಾಮಗಾರಿಯು ಸುಮಾರು 10ವರ್ಷಗಳಿಂದ ಸ್ಥಗಿತವಾಗಿದ್ದ ಕಾಮಗಾರಿಗೆ ಮಾನ್ಯ ಆಯುಕ್ತರು ರವರ ಆದೇಶ ಮೇರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪಶ್ಚಿಮ ವಲಯದ ಅಭಿಯಂತರ ವಿಭಾಗ ಹಾಗೂ ವಿಶೇಷ ಜಾಗೃತ ದಳದ ಮುಖ್ಯಸ್ಥರಾದ ಮಾನ್ಯ ಪೊಲೀಸ್ ಅಧಿಕ್ಷಕರಾದ ಶ್ರೀ ಕೆ ಎನ್ ನಾಗರಾಜ್ ರವರ ಮಾರ್ಗದರ್ಶನದಲ್ಲಿ ಹಾಗೂ ಪೊಲೀಸ್ ಉಪ ಅಧಿಕ್ಷಕರಾದ ಶ್ರೀ ಹನುಮಂತರಾಯ ರವರ ತಂಡದೊಂದಿಗೆ ಸ್ಥಳೀಯ ಪೊಲೀಸ್ ತಂಡದ ಸಹಭಾಗಿತ್ವದೊಂದಿಗೆ ಸುಮಾರು 60.00 ಕೋಟಿ ಬೆಲೆಬಾಳುವ ಪ್ರದೇಶವನ್ನು ಮರು ವಶಕ್ಕೆ ಪಡೆಯಲಾಯಿತು.

# ಕಲ್ಮಲಾ ವ್ಯಾಪ್ತಿಯಲ್ಲಿ ಜುಲೈ 10ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಜುಲೈ 07 :** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜುಲೈ 10ರ ಬೆಳಗ್ಗೆ 11 ಗಂಟೆಯಿಂದ ಸಂಜೆ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 5.70 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ : 11 ಮಂದಿ ಸೆರೆ



**ಬೆಂಗಳೂರು,ಜು.7–**ಮಾದಕ ವಸ್ತುಗಳ ಸಾಗಾಣೆ ಮಾರಾಟ ಸೇವನೆ ವಿರುದ್ಧ ಸಮರ ಸಾರಿರುವ ನಗರ ಪೊಲೀಸರು ಹೊರರಾಜ್ಯದ 9 ಸ್ಥಳೀಯ ಇಬ್ಬರು ಸೇರಿ 11 ಮಂದಿ ಡ್ರಗ್ ಫೆಡ್ಲರ್ ಗಳನ್ನು ಬಂಧಿಸಿ 5.70 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದ್ದಾರೆ.

ವಿದ್ಯಾರಣ್ಯಪುರ, ಜೀವನಭೀಮಾನಗರ, ದೇವನಹಳ್ಳಿ ಹಾಗೂ ಹೆಬ್ಬಗೋಡಿ ಪೊಲೀಸರು ಕಾರ್ಯಾಚರಣೆ ಕೈಗೊಂಡು ಬಂಧಿತ 11 ಮಂದಿ ಹೊರರಾಜ್ಯದ ಡ್ರಗ್ ಫೆಡ್ಲರ್ ಗಳಿಂದ 5.90 ಲಕ್ಷ ನಗದು,

2 ಕೆ.ಜಿ ಎಂಡಿಎಂಎ,1 ಕೆಜಿ 767 ಗ್ರಾಂ ಹೈಡೋಗಾಂಜಾ, 32 ಕೆಜಿ 920 ಗ್ರಾಂ ಗಾಂಜಾ,2 ಐ–ಪೋನ್, 1 ದ್ವಿಚಕ್ರ ವಾಹನ ಸೇರಿ 5.70 ಕೋಟಿ ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಾಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ವಿದ್ಯಾರಣ್ಯಪುರ ಪೊಲೀಸರು ತ್ರಿಪುರದ ಸಂದೀಪ್ ಮಲ್ಲಿಕ್(26)ಶಂತನು ಹೆಬರ್ಮಾ(24)ನನ್ನು ಬಂಧಿಸಿ 4 ಕೋಟಿ ಮೌಲ್ಯದ 2 ಕೆಜಿ ಎಂಡಿಎಂಎ ವಶಪಡಿಸಿಕೊಂಡಿದ್ದಾರೆ ಎಂದು ಹೇಳಿದರು.

ದೇವನಹಳ್ಳಿ ಪೊಲೀಸರು ಬಿಹಾರದ ತುಪಾನಿ ಯಾದವ್(30) ಬಿಟ್ಟುಕುಮಾರ್(28) ಸುಶಾಂತ್ ಕುಮಾರ್ (20)ತ್ರಿಪುರದ ಲಿಟ್ಟನ್ ದೇಬನಾಥ್(32)ಪಶ್ಚಿಮ ಬಂಗಾಳದ ಸುಮನ್ ದಾಸ್ (23) ನನ್ನು ಬಂಧಿಸಿ 16.70 ಲಕ್ಷ ಮೌಲ್ಯದ 16 ಕೆಜಿ920 ಗ್ರಾಂ ಗಾಂಜಾ ಜಪ್ತಿ ಮಾಡಲಾಗಿದೆ ಎಂದು ಹೇಳಿದರು.

ಹೆಬ್ಬಗೋಡಿ ಪೊಲೀಸರು ಮೊಹಮ್ಮದ್ ಕುಂದರ್(32) ನಿತೇಶ್ ಪೂಜಾರಿ(32)ನನ್ನು ಬಂಧಿಸಿ 16 ಲಕ್ಷ ಮೌಲ್ಯದ 16 ಕೆಜಿ ಗಾಂಜಾ ಮೌಲ್ಯದ ಗಾಂಜಾ ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜೀವನಭೀಮಾನಗರ ಪೊಲೀಸರು ಕೇರಳದ ಜಾಸೀರ್(32) ಅಭಿಷೇಕ್(21)ನನ್ನು ಬಂಧಿಸಿ 1.37 ಕೋಟಿ ಮೌಲ್ಯದ 1ಕೆಜಿ 767 ಗ್ರಾಂ ಹೈಡ್ರೋ ಗಾಂಜಾ 5.90 ಲಕ್ಷ ನಗದು, ಐಪೋನ್ ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಬಂಧಿತ 11ಮಂದಿಯನ್ನು ಹೆಚ್ಚಿನ ವಿಚಾರಣೆ ನಡೆಸಿದಾಗ ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ ಹೊರ ರಾಜ್ಯದ ಹಾಗೂ ರಾಜ್ಯದ ಅಪರಿಚಿತ ವ್ಯಕ್ತಿಗಳಿಂದ ನಿಷೇಧಿತ ಮಾದಕ ವಸ್ತುಗಳನ್ನು ಕಡಿಮೆ ಬೆಲೆಗೆ ಖರೀದಿಸಿಕೊಂಡು ಬಂದು ಸಾರ್ವಜನಿಕರಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದುದಾಗಿ ತಪ್ಪೊಪ್ಪಿಕೊಂಡಿರುತ್ತಾರೆ.

ಬಂಧಿತ 11ಮಂದಿ ಆರೋಪಿಗಳನ್ನು ವಿವಿಧ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುತ್ತದೆ.

ಈ ಕಾರ್ಯಾಚರಣೆಗಳನ್ನು ಈಶಾನ್ಯ ವಿಭಾಗದ ಡಿಸಿಪಿ ಜೆ.ಕೆ.ಮಿಥುನ್ ಕುಮಾರ್, ಪೂರ್ವ ವಿಭಾಗದ ಡಿಸಿಪಿ ಡಾ:ವಿಕ್ರಮ್ ಅಮಟೆ, ಎಲೆಕ್ಟ್ರಾನಿಕ್‌ಸಿಟಿ ವಿಭಾಗದ ಡಿಸಿಪಿ ನಾರಾಯಣ್.ಎಂ ಮಾರ್ಗದರ್ಶನದಲ್ಲಿ ಎಸಿಪಿ ಇನ್ಸ್‌ಪೆಕ್ಟರ್‌ಗಳಾದ ಮತ್ತವರ ಸಿಬ್ಬಂದಿ ಕೈಗೊಂಡಿದೆ ಎಂದು ತಿಳಿಸಿದರು.

# 38 ಉಗ್ರರಿಗೆ ಗಲ್ಲು ಶಿಕ್ಷೆ: ತೀರ್ಪು ಎತ್ತಿಹಿಡಿದ ಗುಜರಾತ್ ಹೈಕೋರ್ಟ್

**ಅಹಮದಾಬಾದ್,ಜು7:** ದೇಶವನ್ನೇ ಬೆಚ್ಚಿಬೀಳಿಸಿದ್ದ 2008ರ ಅಹಮದಾಬಾದ್ ಸರಣಿ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಗುಜರಾತ್ ಹೈಕೋರ್ಟ್ ಇಂದುಐತಿಹಾಸಿಕ ತೀರ್ಪು ನೀಡಿದೆ. ಪ್ರಕರಣದಲ್ಲಿ ಮರಣದಂಡನೆಗೆ ಗುರಿಯಾಗಿದ್ದ ಎಲ್ಲಾ 38 ಉಗ್ರರ ಗಲ್ಲು ಶಿಕ್ಷೆಯನ್ನು ನ್ಯಾಯಾಲಯವು ಎತ್ತಿಹಿಡಿದಿದೆ. ಇದರೊಂದಿಗೆ, ಜೀವಾವಧಿ ಶಿಕ್ಷೆಗೆ ಒಳಗಾಗಿದ್ದ ಇನ್ನುಳಿದ 11 ಉಗ್ರರ ಶಿಕ್ಷೆಯನ್ನೂ ಸಹ ಹೈಕೋರ್ಟ್ ಖಾಯಂಗೊಳಿಸಿದೆ.




ತನ್ನ ಮಹತ್ವದ ತೀರ್ಪಿನಲ್ಲಿ ಹೈಕೋರ್ಟ್, ಸ್ಫೋಟದಲ್ಲಿ ಮೃತರಾದ 56 ಅಮಾಯಕರ ಕುಟುಂಬಗಳಿಗೆ ತಲಾ 10 ಲಕ್ಷ ರೂಪಾಯಿ ಹಾಗೂ ಗಾಯಗೊಂಡ 200ಕ್ಕೂ ಹೆಚ್ಚು ಸಂತ್ರಸ್ತರಿಗೆ ತಲಾ 1 ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಆದೇಶಿಸಿದೆ.

2006 ಜುಲೈ 26 ರಂದು ಗುಜರಾತ್‌ನ ಅಹಮದಾಬಾದ್‌ನ ಸುಮಾರು 20 ವಿವಿಧ ಸ್ಥಳಗಳಲ್ಲಿ ಕೇವಲ 70 ನಿಮಿಷಗಳ ಅಂತರದಲ್ಲಿ 21 ಸರಣಿ ಬಾಂಬ್ ಸ್ಫೋಟಗಳು ಸಂಭವಿಸಿದ್ದವು. ಈ ಭೀಕರ ಭಯೋತ್ಪಾದನಾ ದಾಳಿಯಲ್ಲಿ 56 ಜನರು ಪ್ರಾಣ ಕಳೆದುಕೊಂಡರೆ, 200ಕ್ಕೂ ಹೆಚ್ಚು ಜನ ತೀವ್ರವಾಗಿ ಗಾಯಗೊಂಡಿದ್ದರು. ಈ ದಾಳಿಯ ಹೊಣೆಯನ್ನು 'ಹರ್ಕತ್–ಉಲ್–ಜಿಹಾದ್–ಅಲ್–ಇಸ್ಲಾಮಿ' ಎಂಬ ಇಸ್ಲಾಮಿಕ್ ಉಗ್ರಗಾಮಿ ಸಂಘಟನೆ ಹೊತ್ತುಕೊಂಡಿತ್ತು.

ಮತ್ತೊಂದೆಡೆ, ನವೆಂಬರ್ 2025 ರಲ್ಲಿ ನಡೆದ ದೆಹಲಿ ಕೆಂಪುಕೋಟೆ ಕಾರ್ ಬಾಂಬ್ ಸ್ಫೋಟ ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳ ಚುರುಕುಗೊಳಿಸಿದೆ. ಈ ಸ್ಫೋಟದಲ್ಲಿ ಮೃತಪಟ್ಟವರ ದೇಹದ ಭಾಗಗಳಿಗೆ ಸಂಬಂಧಿಸಿದ ವಿಧಿವಿಜ್ಞಾನ ವರದಿಯನ್ನು ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಸಲ್ಲಿಸಿದೆ.

ಪ್ರಕರಣದ ತನಿಖೆ ನಡೆಸುತ್ತಿರುವ ಎನ್‌ಐಎ, ಶಾಹೀನ್ ಸಯೀದ್ ಸೇರಿದಂತೆ 10 ಆರೋಪಿಗಳ ವಿರುದ್ಧ ಈಗಾಗಲೇ ದೋಷಾರೋಪಣೆ ಪಟ್ಟಿ (ಚಾರ್ಜ್‌ಶೀಟ್) ಸಲ್ಲಿಕೆ ಮಾಡಿದೆ. ಮಂಗಳವಾರ ವಿಶೇಷ ನ್ಯಾಯಾಧೀಶ ಪೀತಾಂಬರ್ ದತ್ ಅವರ ಮುಂದೆ 9 ಆರೋಪಿಗಳನ್ನು ಹಾಜರುಪಡಿಸಲಾಗಿದ್ದು, ನ್ಯಾಯಾಲಯವು ಅವರ ನ್ಯಾಯಾಂಗ ಬಂಧನವನ್ನು ಜುಲೈ 13ರವರೆಗೆ ವಿಸ್ತರಿಸಿ ಆದೇಶಿಸಿದೆ.

ಇದೇ ಪ್ರಕರಣದಲ್ಲಿ 'ಅನ್ಸಾರ್ ಗಜ್ವತ್ ಉಲ್ ಹಿಂದ್' ಸಂಘಟನೆಗೆ ಸೇರಿದ ಜಮೀರ್ ಅಹ್ಮದ್ ಅಹಂಗರ್ ಮತ್ತು ತುಫೈಲ್ ಅಹ್ಮದ್ ಭಟ್ ಎಂಬ ಇಬ್ಬರು ಉಗ್ರರ ವಿರುದ್ಧ ಎನ್‌ಐಎ ಪೂರಕ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದೆ. ಫೆಬ್ರವರಿ 2026 ರಲ್ಲಿ ಬಂಧಿತರಾಗಿದ್ದ ಈ ಇಬ್ಬರು ಉಗ್ರರು, ದೆಹಲಿ ಸ್ಫೋಟಕ್ಕಾಗಿ ಉಮರ್, ಇರ್ಫಾನ್ ಮತ್ತು ಆದಿಲ್ ಎಂಬುವವರಿಂದ ರೈಫಲ್, ಪಿಸ್ತೂಲ್ ಮತ್ತು ಜೀವಂತ ಗುಂಡುಗಳನ್ನು ಪಡೆದು ಶಸ್ತ್ರಾಸ್ತ್ರ ಸಂಗ್ರಹಣೆಯಲ್ಲಿ ತೊಡಗಿದ್ದರು ಎಂದು ಎನ್‌ಐಎ ಆರೋಪಿಸಿದೆ. ಪಟಿಯಾಲ ಹೌಸ್‌ನಲ್ಲಿರುವ ಎನ್‌ಐಎ ನ್ಯಾಯಾಲಯವು ಈ ವರದಿಯ ಪರಿಶೀಲನೆ ನಡೆಸಲಿದೆ.

## ದಂಡ ವಿನಾಯಿತಿ ಖಾಸಗಿ ಕಾಲೇಜು ವಿದ್ಯಾರ್ಥಿಗಳಿಗೂ ವಿಸ್ತರಿಸಿ: ಐ.ಕೆ. ಪಾಟೀಲ



**ಕಲಬುರಗಿ,ಜು.7–**ಪಿಯುಸಿ ವಿಳಂಬ ದಾಖಲಾತಿ ದಂಡ ವಿನಾಯಿತಿ ಆದೇಶಕ್ಕೆ ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘ ಸ್ವಾಗತಿಸಿದೆ.
(06–07–2026 ಶಾಲಾ ಶಿಕ್ಷಣ ಇಲಾಖೆಯ ಆದೇಶದಂತೆ )ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 1ನೇ ಮತ್ತು 2ನೇ ಪಿಯುಸಿಗೆ ವಿಳಂಬವಾಗಿ ಸೇರುವ ವಿದ್ಯಾರ್ಥಿಗಳಿಗೆ 670 ರೂ. ವಿಳಂಬ ಶುಲ್ಕ ಮತ್ತು 2220 ರೂ. ವಿಶೇಷ ದಂಡದಿಂದ ಸಂಪೂರ್ಣ ವಿನಾಯಿತಿ ನೀಡಲಾಗಿದೆ. ಸರ್ಕಾರದ ನಿರ್ಧಾರ ಸ್ವಾಗತಾರ್ಹ. ಇದರಿಂದ ಆರ್ಥಿಕವಾಗಿ ಹಿಂದುಳಿದ ಸಾವಿರಾರು ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಆದರೆ ಅನುದಾನಿತ ಮತ್ತು ಖಾಸಗಿ ಕಾಲೇಜುಗಳ ವಿದ್ಯಾರ್ಥಿಗಳಿಗೂ ಇದೇ ವಿನಾಯಿತಿ ವಿಸ್ತರಿಸಬೇಕು ಎಂದು ಸಂಘದ ರಾಜ್ಯ ಉಪಾಧ್ಯಕ್ಷ ಈರನಗೌಡ ಕೆ ಪಾಟೀಲ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

## ಜಿಲ್ಲಾ ನ್ಯಾಯಾಲಯಕ್ಕೆ ಹುಸಿ ಬಾಂಬ್ ಸಂದೇಶ: ಪರಿಶೀಲನೆ



**ಕಲಬುರಗಿ,ಜು.7–**ನಗರದಲ್ಲಿನ ಕಲಬುರಗಿ ಜಿಲ್ಲಾ ನ್ಯಾಯಾಲಯದ ಈ–ಮೇಲ್‌ಗೆ ಹುಸಿ ಬಾಂಬ್ ಸಂದೇಶ ಬಂದಿದ್ದು, ಕೂಡಲೇ ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್.ಡಿ., ಡಿಸಿಪಿಗಳಾದ ಶಾಲೂ., ಪ್ರವೀಣ ಹೆಚ್ ನಾಯಕ್ ಅವರು ಸ್ಥಳಕ್ಕೆ ಭೇಟಿ ನೀಡಿ ಸಾರ್ವಜನಿಕರನ್ನು ಬೇರೆ ಕಡೆಗೆ ಸ್ಥಳಾಂತರಿಸಿ, ಬಾಂಬ್ ಪತ್ತೆ ಹಾಗೂ ನಿಷ್ಕ್ರಿಯ ದಳ ಮತ್ತು ವಿದ್ವಂಸಕ ಕೃತ್ಯ ತಪಾಸಣೆ ದಳ ತಂಡವು ಸ್ಥಳ ಪರಿಶಿಲೀಸಲಾಗಿ ಯಾವುದೇ ರೀತಿಯ ಬಾಂಬ್ ಪತ್ತೆಯಾಗಿರುವುದಿಲ್ಲ.
ಈ ಘಟನೆಗೆ ಸಂಬಂಧಿಸಿದತೆ ಸ್ಟೇಷನ್ ಬಜಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಇದೊಂದು ಸುಳ್ಳು ಬೆದರಿಕೆ ಈ–ಮೇಲ್ ಸಂದೇಶವಾಗಿರುವುದರಿಂದ ಸಾರ್ವಜನಿಕರು ಯಾವುದೇ ರೀತಿಯ ಆತಂಕಪಡುವ ಅಗತ್ಯವಿಲ್ಲ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದ್ದಾರೆ.

## ವಾರ್ಡ್ 31ರಲ್ಲಿ 20 ಲಕ್ಷ ವೆಚ್ಚದ ನೂತನ ಸಾರ್ವಜನಿಕ ಶೌಚಾಲಯ ಲೋಕಾರ್ಪಣೆ



**ಯಾದಗಿರಿ:** ನಗರದಲ್ಲಿ ಸ್ವಚ್ಛತೆ ಕಾಪಾಡುವ ಜೊತೆಗೆ ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಅದರ ಭಾಗವಾಗಿ ವಾರ್ಡ್ ಸಂಖ್ಯೆ 31ರ ಶಶಿಧರ ಕಾಲೋನಿಯಲ್ಲಿ ನಿರ್ಮಿಸಲಾದ ನೂತನ ಸಾರ್ವಜನಿಕ ಶೌಚಾಲಯವನ್ನು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಸೋಮವಾರ ಉದ್ಘಾಟಿಸಿದರು.ನಗರಸಭೆಯ ವತಿಯಿಂದ ನಗರೋತ್ಥಾನ ಹಂತ–3 ಯೋಜನೆಯಡಿ ಸುಮಾರು 20 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಈ ಶೌಚಾಲಯ ಸಾರ್ವಜನಿಕ ಬಳಕೆಗೆ ಸಮರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ, ವೇಗವಾಗಿ ಬೆಳೆಯುತ್ತಿರುವ ನಗರದಲ್ಲಿ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಆಡಳಿತದ ಪ್ರಮುಖ ಆದ್ಯತೆಯಾಗಿದೆ. ನಗರಕ್ಕೆ ವಿವಿಧ ಭಾಗಗಳಿಂದ ಆಗಮಿಸುವ ನಾಗರಿಕರು ಹಾಗೂ ಪ್ರಯಾಣಿಕರು ಶೌಚಾಲಯದ ಕೊರತೆಯಿಂದ ಸಂಕಷ್ಟ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗಬಾರದು ಎಂಬ ಉದ್ದೇಶದಿಂದ ಪ್ರಮುಖ ಸ್ಥಳಗಳಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲಾಗುತ್ತಿದೆ ಎಂದು ಹೇಳಿದರು.ನಿರ್ಮಾಣಗೊಂಡಿರುವ ಶೌಚಾಲಯುಗಳನ್ನು ಸಾರ್ವಜನಿಕರು ಜವಾಬ್ದಾರಿಯಿಂದ ಬಳಸುವ ಜೊತೆಗೆ ಅವುಗಳ ಸ್ವಚ್ಛತೆ ಮತ್ತು ನಿರ್ವಹಣೆಯನ್ನು ನಗರಸಭೆ ಸಮರ್ಪಕವಾಗಿ ಕೈಗೊಳ್ಳಬೇಕು. ಉತ್ತಮ ನಿರ್ವಹಣೆಯ ಮೂಲಕ ಸಾರ್ವಜನಿಕ ಆಸ್ತಿಯನ್ನು ದೀರ್ಘಕಾಲ ಸಂರಕ್ಷಿಸಬಹುದಾಗಿದೆ ಎಂದು ಅವರು ತಿಳಿಸಿದರು.

ನಗರಸಭೆ ಪೌರಾಯುಕ್ತ ಉಮೇಶ್ ಚವ್ಹಾಣ ಮಾತನಾಡಿ, ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯಗಳ ವ್ಯವಸ್ಥೆ ಮಾಡಲಾಗಿದ್ದು, ಶುದ್ಧ ನೀರಿನ ಪೂರೈಕೆಗಾಗಿ ಬೋರ್‌ವೆಲ್ ಅಳವಡಿಸಲಾಗಿದೆ. ಜೊತೆಗೆ ಪ್ರತ್ಯೇಕ ಮೂತ್ರಾಲಯದ ವ್ಯವಸ್ಥೆಯನ್ನೂ ಕಲ್ಪಿಸಲಾಗಿದ್ದು, ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯುಡಿಎ ಅಧ್ಯಕ್ಷ ಬಾಬುರಾವ ಕಾಡ್ಲೂರ್, ನಗರಸಭೆ ಸಿಬ್ಬಂದಿಗಳಾದ ಪ್ರಶಾಂತ, ಶಂಭುಲಿಂಗ, ನಾಗರಾಜ್, ಶರಣಮ್ಮ, ಮಂಜುನಾಥ, ಅರುಣ ಹಾಗೂ ವಾರ್ಡನ ಸಾರ್ವಜನಿಕರು ಉಪಸ್ಥಿತರಿದ್ದರು.

# ಕಟ್ಟಡ ಕಾರ್ಮಿಕರ ಆರೋಗ್ಯ ಪಿಂಚಣಿ ಮಕ್ಕಳ ಶಿಕ್ಷಣಕ್ಕೆ ಹಣ ಬಿಡುಗಡೆ ಎಐಯುಟಿಸಿ ಆಗ್ರಹ




**ಬಳ್ಳಾರಿ:ಜು,7–** ಎಐಟಿಯುಸಿಗೆ ಸೇರಿದ ಕರ್ನಾಟಕ ರಾಜ್ಯ ಸಂಯುಕ್ತ ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಕಾರ್ಮಿಕ ಇಲಾಖೆ ಮುಂದೆ ಇಂದು ಕಟ್ಟಡ ಕಾರ್ಮಿಕರ ಆರೋಗ್ಯ ಪಿಂಚಣಿ ಮಕ್ಕಳ ಶಿಕ್ಷಣಕ್ಕೆ ಹಣ ಬಿಡುಗಡೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯ್ತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಡಾ. ಪ್ರಮೋದ್ " ಕರ್ನಾಟಕ ರಾಜ್ಯದ ಲಕ್ಷಾಂತರ ಕಟ್ಟಡ ಕಾರ್ಮಿಕರು ತಮ್ಮ ಜೀವದ ಹಂಗು ತೊರೆದು ದುಡಿಯುವ ಅವರ ಬೆವರಿನ ದುಡಿಮೆಯಿಂದ ಸಂಗ್ರಹವಾಗಿರುವ ನಿಧಿಯನ್ನು ಕಲ್ಯಾಣಮಂಡಳಿಯ ಘೋಷಿತ ಹಕ್ಕುಗಳ ಜಾರಿಗಾಗಿ ಬಳಸುವ ಬದಲು, ಭ್ರಷ್ಟಾಚಾರಕ್ಕೆ ಇಂಬು ಕೊಡುವ ಅನ್ಯ ಉದ್ದೇಶಗಳಿಗೆ ಬಳಸುತ್ತಿರುವುದು ಅತ್ಯಂತ ಖಂಡನೀಯ ಎಂದರು.

ಆರೋಗ್ಯ, ಪಿಂಚಣಿ, ಮಕ್ಕಳ ಶಿಕ್ಷಣ ದಂತಹ ಬದುಕಿನ ವಿಷಯಗಳಿಗೆ ಯೋಜನೆಗಳನ್ನು ಜಾರಿಮಾಡುವುದರ ಬದಲು ಹಣ ನುಂಗುವ ವಿವಿಧ ಹೆಸರಿನ ಕಿಟ್ ನೀಡಿಕೆ  ವಸ್ತುಗಳ ಖರೀದಿ ಮತ್ತು ವಿತರಣೆಯಲ್ಲಿಯೇ ಕಲ್ಯಾಣ ಮಂಡಳಿಯು ತೊಡಗಿದೆಂದು ಆಪಾದಿಸಿದರು.

ಕಟ್ಟಡ ಕಾರ್ಮಿಕರ ನೈಜ ಬೇಡಿಕೆಗಳಾದ, ವಿವಿಧ ಹೆಸರಿನ ಕಿಟ್ಗಳ ವಿತರಣೆಯನ್ನು ತಕ್ಷಣವೇ ನಿಲ್ಲಿಸಿ, ಅದರ ಸಂಪೂರ್ಣ ಹಣವನ್ನು ಕಾರ್ಮಿಕರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮಾ ಮಾಡಬೇಕು. 2 ವರ್ಷ ಬಾಕಿಯಿರುವ ಶೈಕ್ಷಣಿಕ ಧನಸಹಾಯವನ್ನು ಹಳೆಯ ದರದಲ್ಲಿ ಕೂಡಲೇ ಪಾವತಿಸಬೇಕು. ಶಾಲಾ ಕಿಟ್ ಗಳಿಗೆ ಮೀಸಲಿಟ್ಟಿರುವ ?115 ಕೋಟಿ ಹಣವನ್ನು ಮಕ್ಕಳಿಗೆ ಶೈಕ್ಷಣಿಕ ಧನಸಹಾಯವಾಗಿ ವಿತರಿಸಬೇಕು.ಎಲ್ಲಾ ನೋಂದಾಯಿತ ಕಟ್ಟಡ ಕಾರ್ಮಿಕರು ಹಾಗೂ ಅವರ ಕುಟುಂಬಸ್ಥರಿಗೆ ಗುಣಮಟ್ಟದ ನಗದುರಹಿತ ವೈದ್ಯಕೀಯ ಚಿಕಿತ್ಸೆ ಮತ್ತು ಆರೋಗ್ಯ ಸೌಲಭ್ಯವನ್ನು ಖಾತರಿಪಡಿಸಬೇಕು. 60 ವರ್ಷ ತುಂಬಿದ ನಂತರ 6 ತಿಂಗಳೊಳಗೆ ಪಿಂಚಣಿಗೆ ಅರ್ಜಿ ಸಲ್ಲಿಸಬೇಕೆಂಬ ಅನ್ಯಾಯದ ನಿಯಮವನ್ನು ತಕ್ಷಣವೇ ರದ್ದುಪಡಿಸಿ, 60 ವರ್ಷ ತುಂಬಿದ ಪ್ರತಿಯೊಬ್ಬ ನೋಂದಾಯಿತ ಕಟ್ಟಡ ಕಾರ್ಮಿಕರಿಗೂ ಯಾವುದೇ ತಾರತಮ್ಯವಿಲ್ಲದೆ ಪಿಂಚಣಿ ಮಂಜೂರು ಮಾಡಬೇಕು ಎಂದರು.

ಸಂಘಟನೆಯ ಮುಖಂಡ ಸುರೇಶ್, ಎಲ್ಲಾ ಹಕ್ಕುಗಳನ್ನು ಪಡೆಯಲು ದೊಡ್ಡ ಸಂಖ್ಯೆಯಲ್ಲಿರುವ ಸಮಸ್ತ ಕಟ್ಟಡ ಕಾರ್ಮಿಕರು ತಮ್ಮ ಒಗ್ಗಟ್ಟನ್ನು ಬಲಪಡಿಸಿಕೊಂಡು ರಾಜಕೀಯ ರಹಿತ ಹೋರಾಟಕ್ಕೆ ಮುಂದಾಗಬೇಕೆಂದು ಕರೆ ನೀಡಿದರು.

ಮುಖಂಡರಾದ ಜಯರಾಜ್, ನೀಲಪ್ಪ, ಮೊಹಮದ್ ಎಜಸ್, ಮಲ್ಲಿಕಾರ್ಜುನ್, ಪಂಪ, ಶೇಷಾವಲಿ ಮುಂತಾದವರು ಭಾಗವಹಿಸಿದ್ದರು.

# ರೋಗಿಗಳಿಗೆ ಪ್ರೀತಿ, ವಿಶ್ವಾಸದಿಂದ ಚಿಕಿತ್ಸೆ ನೀಡಿದರೆ ಅರ್ಧ ರೋಗ ಗುಣವಾಗುತ್ತದೆ: ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ



**ಯಾದಗಿರ:** ವೈದ್ಯಕೀಯ ವೃತ್ತಿ ಕೇವಲ ಉದ್ಯೋಗವಲ್ಲ, ಅದು ಮಾನವೀಯ ಮೌಲ್ಯಗಳು ಹಾಗೂ ಸೇವಾ ಮನೋಭಾವವನ್ನು ಪ್ರತಿಬಿಂಬಿಸುವ ಅತ್ಯಂತ ಪವಿತ್ರ ಕ್ಷೇತ್ರವಾಗಿದೆ. ಚಿಕಿತ್ಸೆಗಾಗಿ ಬರುವ ಪ್ರತಿಯೊಬ್ಬ ರೋಗಿಯನ್ನು ಪ್ರೀತಿ, ವಿಶ್ವಾಸ ಮತ್ತು ಆತ್ಮೀಯತೆಯಿಂದ ಮಾತನಾಡಿಸಿ ಆರೈಕೆ ಮಾಡಿದರೆ ಅವರ ಅರ್ಧದಷ್ಟು ನೋವು ಅಲ್ಲಿಯೇ ಕಡಿಮೆಯಾಗುತ್ತದೆ. ಆದ್ದರಿಂದ ವೈದ್ಯರು ಮಾನವೀಯ ಸ್ಪಂದನೆಯೊಂದಿಗೆ ಸೇವೆ ಸಲ್ಲಿಸಬೇಕು ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಸಲಹೆ ನೀಡಿದರು.

ನಗರದ ಎನ್‌ವಿಎಂ ಸಭಾಂಗಣದಲ್ಲಿ ಭಾರತೀಯ ವೈದ್ಯಕೀಯ ಸಂಘ (ಐಎಂಎ) ಜಿಲ್ಲಾ ಘಟಕದ ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೈದ್ಯಕೀಯ ಕ್ಷೇತ್ರವು ಇತ್ತೀಚಿನ ವರ್ಷಗಳಲ್ಲಿ ತಂತ್ರಜ್ಞಾನ ಮತ್ತು ಸಂಶೋಧನೆಯ ಮೂಲಕ ಹೊಸ ಎತ್ತರ ತಲುಪಿದೆ. ಅತ್ಯಾಧುನಿಕ ವೈದ್ಯಕೀಯ ಉಪಕರಣಗಳು ಹಾಗೂ ಸುಧಾರಿತ ಚಿಕಿತ್ಸಾ ವಿಧಾನಗಳಿಂದ ಸಂಕೀರ್ಣ ಕಾಯಿಲೆಗಳಿಗೂ ಪರಿಣಾಮಕಾರಿ ಚಿಕಿತ್ಸೆ ಸಾಧ್ಯವಾಗುತ್ತಿದೆ. ಆದರೆ ವೈದ್ಯಕೀಯ ಕ್ಷೇತ್ರದ ಯಶಸ್ಸಿನ ಮೂಲ ಅಂಶ ರೋಗಿಯೊಂದಿಗೆ ಬೆಳೆಸುವ ವಿಶ್ವಾಸದ ಸಂಬಂಧವೇ ಆಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಪ್ರತಿಯೊಬ್ಬ ವೈದ್ಯರು ರೋಗಿಯ ನೋವನ್ನು ತಮ್ಮ ನೋವಿನಂತೆ ಅರ್ಥಮಾಡಿಕೊಂಡು, ಸಹಾನುಭೂತಿಯಿಂದ ಚಿಕಿತ್ಸೆ ನೀಡಿದರೆ ಸಮಾಜಕ್ಕೆ ಮಹತ್ತರ ಸೇವೆ ಸಲ್ಲಿಸಿದಂತಾಗುತ್ತದೆ. ವೈದ್ಯರ ಸೇವಾ ಮನೋಭಾವವೇ ಅವರನ್ನು ಜನರ ದೃಷ್ಟಿಯಲ್ಲಿ "ಎರಡನೇ ದೇವರು" ಎಂಬ ಗೌರವಕ್ಕೆ ಪಾತ್ರರನ್ನಾಗಿಸಿದೆ ಎಂದು ಹೇಳಿದರು.

ಇಂದು ವೈದ್ಯರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದು, ಮುಂದಿನ ದಿನಗಳಲ್ಲಿ ಪ್ರತಿಯೊಂದು ಕುಟುಂಬದಲ್ಲಿಯೂ ಒಬ್ಬ ವೈದ್ಯರನ್ನು ಕಾಣಬಹುದಾದ ಪರಿಸ್ಥಿತಿ ನಿರ್ಮಾಣವಾಗುವ ಸಾಧ್ಯತೆಯಿದೆ. ವಿಶೇಷವಾಗಿ ಮಹಿಳೆಯರು ವೈದ್ಯಕೀಯ ಶಿಕ್ಷಣದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿದ್ದು, ತಮ್ಮ ಪರಿಶ್ರಮ, ಶಿಸ್ತು ಮತ್ತು ಗುರಿಸಾಧನೆಯ ಮೂಲಕ ಸಮಾಜಕ್ಕೆ ಮಾದರಿಯಾಗುತ್ತಿದ್ದಾರೆ ಎಂದು ಪ್ರಶಂಸಿಸಿದರು.

ಜಿಲ್ಲೆಯ ಹಿರಿಯ ವೈದ್ಯರಾದ ಡಾ. ಸಂಗಮ್ಮ ಹಾಗೂ ಡಾ. ವೀರಬಸವಂತರೆಡ್ಡಿ ಮುದ್ನಾಳ ಅವರ ಸೇವೆ ಮತ್ತು ಅನುಭವ ಇಂದಿನ ಯುವ ವೈದ್ಯರಿಗೆ ಸ್ಫೂರ್ತಿದಾಯಕವಾಗಿದೆ. ಅವರ ಸೇವಾ ಮನೋಭಾವವನ್ನು ಹೊಸ ತಲೆಮಾರಿನ ವೈದ್ಯರು ಆದರ್ಶವಾಗಿ ಸ್ವೀಕರಿಸಬೇಕು ಎಂದು ಕರೆ ನೀಡಿದರು.

ಭಾರತೀಯ ವೈದ್ಯಕೀಯ ಸಂಘವು ಜಿಲ್ಲೆಯ ವೈದ್ಯರನ್ನು ಒಗ್ಗೂಡಿಸಿ ಆರೋಗ್ಯ ಸೇವೆಯ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಉತ್ತಮ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಸಂಘದ ಎಲ್ಲ ಜನಪರ ಚಟುವಟಿಕೆಗಳಿಗೆ ತಮ್ಮ ಸಂಪೂರ್ಣ ಸಹಕಾರ ಮುಂದುವರಿಯಲಿದೆ ಎಂದು ಶಾಸಕ ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಭಾರತೀಯ ವೈದ್ಯಕೀಯ ಸಂಘದ ಜಿಲ್ಲಾಧ್ಯಕ್ಷ ಡಾ. ಚಂದ್ರಶೇಖರ ಪೂಜಾರಿ ಸಂಘದ ವಾರ್ಷಿಕ ಚಟುವಟಿಕೆಗಳು, ವೈದ್ಯಕೀಯ ಕ್ಷೇತ್ರದ ಅಭಿವೃದ್ಧಿ ಹಾಗೂ ಸಂಘದ ಮುಂದಿನ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಸ್ತ್ರೀರೋಗ ತಜ್ಞೆ ಡಾ. ಸಂಗಮ್ಮ, ಡಾ. ವೀರಬಸವಂತರೆಡ್ಡಿ ಮುದ್ನಾಳ, ಹಿರಿಯ ವೈದ್ಯ ಡಾ. ಸುಭಾಷ ಕರಣಗಿ ಹಾಗೂ ಡಾ. ಲಕ್ಷ್ಮೀ ಪಾಟೀಲ್ ಅತಿಥಿಗಳಾಗಿ ಮಾತನಾಡಿ ವೈದ್ಯಕೀಯ ವೃತ್ತಿಯ ಮಹತ್ವ, ಸಾಮಾಜಿಕ ಹೊಣೆಗಾರಿಕೆ ಮತ್ತು ಸೇವಾ ಮನೋಭಾವದ ಕುರಿತು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನು ನಿರೂಪಿಸಿದ ಡಾ. ವೀರೇಶ ಜಾಕಾ, ಜಿಲ್ಲೆಯಲ್ಲಿನ ವೈದ್ಯಕೀಯ ಸೌಲಭ್ಯಗಳು, ಆರೋಗ್ಯ ಸೇವೆಗಳ ವಿಸ್ತರಣೆ ಹಾಗೂ ವೈದ್ಯರ ಪಾತ್ರದ ಕುರಿತು ವಿವರಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಡಾ. ಭಗವಂತ ಅನವಾರ್, ಡಾ. ಸಿ.ಎಂ. ಪಾಟೀಲ್, ಡಾ. ಸುರೇಶರೆಡ್ಡಿ, ಡಾ. ಸುರೇಖಾ ಹಾಗೂ ಡಾ. ಶೈಲಜಾ ವರ್ಮಾ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಡಾ. ಭಗವಂತ ಅನವಾರ್ ವೈದ್ಯರು ಮತ್ತು ರೋಗಿಗಳ ನಡುವಿನ ದೈನಂದಿನ ಸಂಭಾಷಣೆಯನ್ನು ಹಾಸ್ಯಮಯ ಶೈಲಿಯಲ್ಲಿ ನಿರೂಪಿಸಿ ಸಭಿಕರನ್ನು ನಗೆಗಡಲಲ್ಲಿ ತೇಲಿಸಿದರು. ಕಾರ್ಯಕ್ರಮದಲ್ಲಿ ಡಾ. ಪ್ರಶಾಂತ ಬಾಸುತಕರ್ ಸೇರಿದಂತೆ ಜಿಲ್ಲೆಯ ಅನೇಕ ವೈದ್ಯರು, ಗಣ್ಯರು ಹಾಗೂ ವೈದ್ಯಕೀಯ ವೃತ್ತಿಯ ಸದಸ್ಯರು ಉಪಸ್ಥಿತರಿದ್ದರು

# ಬಿಲ್ ಕಲೆಕ್ಟರ್ ಲೋಕಾಯುಕ್ತ ಬಲೆಗೆ



**ಕಲಬುರಗಿ,ಜು.7**–ಡಾ.ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆಯ ಅನುದಾನ ಬಿಡುಗಡೆ ಮಾಡಲು ಲಂಚಕ್ಕೆ ಬೇಡಿಕೆ ಇಟ್ಟು, ಫೋನ್‌ಪೇ ಮೂಲಕ 15 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದ ಕರದಾಳ ಗ್ರಾಮ ಪಂಚ

ಪಂಚಾಯಿತಿಯ ಬಿಲ್ ಕಲೆಕ್ಟರ್‌ರನ್ನು ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಬಲೆಗೆ ಬೀಳಿಸಿ ಬಂಧಿಸಿದ್ದಾರೆ.

ಚಿತ್ತಾಪುರ ತಾಲೂಕಿನ ಕರದಾಳ ಗ್ರಾಮ ಪಂಚಾಯಿತಿಯ ಕರ ವಸೂಲಿಗಾರ (ಬಿಲ್ ಕಲೆಕ್ಟರ್) ಸಂತೋಷ ರಾಠೋಡ ಬಂಧಿತ ಆರೋಪಿ.

ಹನಿಕೆರಾ ಗ್ರಾಮದ ರಾಮನಾಯಕ ತಾಂಡಾದ ನಿವಾಸಿ ಸಿಖಂದರ್ ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ದೂರಿನ ಪ್ರಕಾರ, ಸಿಖಂದರ್ ಅವರ ಅಕ್ಕ ಸವಿತಾ ಅವರಿಗೆ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ ಯೋಜನೆಯಡಿ ಮಂಜೂರಾಗಿದ್ದ ಮೂರನೇ ಹಾಗೂ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಲು ಆರೋಪಿ 22 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದ. ಬಳಿಕ ಮೊದಲ ಕಂತಾಗಿ ಫೋನ್‌ಪೇ ಮೂಲಕ 15 ಸಾವಿರ ರೂ. ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಆರೋಪಿಯನ್ನು ಬಂದಿಸಿದ್ದಾರೆ.

ಈ ಕಾರ್ಯಾಚರಣೆಯನ್ನು ಲೋಕಾಯುಕ್ತ ಕಲಬುರಗಿ ಪೊಲೀಸ್ ಅಧೀಕ್ಷಕ ಸಿದ್ದರಾಜು ಸಿ. ಅವರ ಮಾರ್ಗದರ್ಶನದಲ್ಲಿ, ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ರಾಜಶೇಖರ ಬಡದೇಸಾರ ಅವರ ನೇತೃತ್ವದಲ್ಲಿ ನಡೆಸಲಾಯಿತು. ಬಂಧಿತ ಆರೋಪಿಯನ್ನು ವಿಚಾರಣೆ ಬಳಿಕ ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗುವುದು ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

# ರಸಗೊಬ್ಬರ ಖರೀದಿಗೆ ಹೋದ ವ್ಯಕ್ತಿ ಕೊಲೆ ಪ್ರಕರಣ: ನಾಲ್ವರ ಬಂಧನ



**ಕಲಬುರಗಿ,ಜು.7:** ರಸಗೊಬ್ಬರ ಖರೀದಿಸಲು ಕಲಬುರಗಿ ನಗರಕ್ಕೆ ತೆರಳಿದ್ದ ವ್ಯಕ್ತಿಯೊಬ್ಬರು ಬಳಿಕ ಶವವಾಗಿ ಪತ್ತೆಯಾಗಿದ್ದ ಪ್ರಕರಣವು ಇದೀಗ ಕೊಲೆ ಪ್ರಕರಣವೆಂದು ಬಹಿರಂಗವಾಗಿದ್ದು, ಘಟನೆಗೆ ಸಂಬಂಧಿಸಿದಂತೆ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ.

ಅಫಜಲಪುರ ತಾಲೂಕಿನ ಹಾವನೂರು ಗ್ರಾಮದ ಶಿವಕುಮಾರ್ ಹೊಸಮನಿ (35) ಕೊಲೆಯಾದ ವ್ಯಕ್ತಿ. ಪ್ರಕರಣದ ತನಿಖೆ ನಡೆಸಿದ ಪೊಲೀಸರು ಬಿದ್ದಾಪುರ ಕಾಲೋನಿಯ ಸಚಿನ್ ಅಲಿಯಾಸ್ ಪ್ರವೀಣಕುಮಾರ್ ಹೂಗಾರ, ಚನ್ನಪ್ಪ ಸೈದಪ್ಪ ಬಬಲಾದ, ಸಚಿನ್ ನಾಗಣ್ಣ ಸುಲ್ತಾನಪುರ ಹಾಗೂ ಶರಣಸಿರಸಗಿ ಗ್ರಾಮದ ಶಿವಕುವಾರ್ ಹೊಳೆ ಎಂಬಾತರನ್ನು ಬಂಧಿಸಿದ್ದಾರೆ. ಪ್ರಕರಣದಲ್ಲಿ ಭಾಗಿಯಾಗಿರುವ ಇನ್ನೊಬ್ಬ ಆರೋಪಿಗಾಗಿ ಶೋಧ ಕಾರ್ಯ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬ್ಯಾನರ್ ಹರಿದಿದ್ದೇ ಕೊಲೆಗೆ ಕಾರಣ

ಶಿವಕುಮಾರ್ ಹೊಸಮನಿ ಅವರು ರಸಗೊಬ್ಬರ ತರಲು ಕಲಬುರಗಿಗೆ ತೆರಳಿದ್ದ ವೇಳೆ ನಾಪತ್ತೆಯಾಗಿದ್ದರು. ಬಳಿಕ ಅವರ ಶವ ಹಾವನೂರು ಗ್ರಾಮದ ಸಮೀಪ ಪತ್ತೆಯಾಗಿದ್ದು, ಪ್ರಕರಣ ಅನುಮಾನಕ್ಕೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಕುಟುಂಬಸ್ಥರು ಇದು ಕೊಲೆ ಎಂದು ಶಂಕಿಸಿ, ಸಮಗ್ರ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವಂತೆ ಒತ್ತಾಯಿಸಿದ್ದರು.

ಶಿವಕುಮಾರ್ ಕಾಣೆಯಾಗಿದ್ದ ವೇಳೆ ಅಶೋಕನಗರ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣವೂ ದಾಖಲಾಗಿತ್ತು. ನಂತರ ತನಿಖೆಯನ್ನು ಚುರುಕುಗೊಳಿಸಿದ ಪೊಲೀಸರು ಹಲವು ಸುಳಿವುಗಳ ಆಧಾರದ ಮೇಲೆ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.ವಿಚಾರಣೆ ವೇಳೆ, ಬ್ಯಾನರ್ ಹರಿದಿದ್ದ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಶಿವಕುಮಾರ್ ಅವರನ್ನು ಹತ್ಯೆ ಮಾಡಿರುವುದಾಗಿ ಆರೋಪಿಗಳು ತಪ್ಪೊಪ್ಪಿಕೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನೊಬ್ಬ ಆರೋಪಿಯ ಬಂಧನಕ್ಕಾಗಿ ಪೊಲೀಸರು ಬಲೆ ಬೀಸಿದ್ದು, ತನಿಖೆ ಮುಂದುವರಿದಿದೆ.

# ಬೈಕ್ ಗಳಿಗೆ ಡಿಕ್ಕಿ ಹೊಡೆದ ಕಾರು: ಮಹಿಳೆ ಸಾವು




**ಭಾಲ್ಕಿ:**ತಾಲ್ಲೂಕಿನ ಬ್ಯಾಲಹಳ್ಳಿ ಗ್ರಾಮದ ಹುಮನಾಬಾದ್– ಭಾಲ್ಕಿ ರಸ್ತೆಯ ಸರ್ಕಾರಿ ಆಸ್ಪತ್ರೆ ಬಳಿ ಕಾರ್ ಬೈಕ್ ಗಳಿಗೆ ಡಿಕ್ಕಿ ಹೊಡೆದ ಪರಿಣಾಮ ಮಹಿಳೆಯೊಬ್ಬಳು ಮೃತಪಟ್ಟಿದ್ದಾಳೆ.

ಭಾನುವಾರ ಸಂಜೆ ಬೀದರ್ ಕಡೆಯಿಂದ ವೇಗವಾಗಿ ಬರುತ್ತಿದ್ದ ಕಾರ್ ಎರಡು ಬೈಕ್ ಗಳಿಗೆ ಡಿಕ್ಕಿ ಹೊಡೆದಿದೆ. ಈ ಅಪಘಾತದಲ್ಲಿ ಬೀದರ್ ತಾಲ್ಲೂಕಿನ ಆಣದೂರು ಗ್ರಾಮದ ಸಂಜುಕುಮಾರ ಪುಂಡಲಿಕರಾವ್ ಪುಲೇಕರ್ (30), ಇವರ ಪತ್ನಿ ಸುಧಾರಾಣಿ ಹಾಗೂ ಭಾಲ್ಕಿ ತಾಲ್ಲೂಕಿನ ನೆಲವಾಡ ಗ್ರಾಮದ ಅಜಯ ಕಾಶಿನಾಥ (22), ಕಿರಣ್ ಅನಿಲ್ ಕುಮಾರ್ (21) ಗಂಭೀರ ಗಾಯಗಳಾಗಿವೆ.

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಸುಧಾರಾಣಿ ರಾಜಕುಮಾರ (26) ಚಿಕಿತ್ಸೆ ಫಲಕಾರಿಯಾಗದೆ ಬೀದರ್ ಸರ್ಕಾರ ಆಸ್ಪತ್ರೆಯಲ್ಲಿ ಸೋಮವಾರ ಮೃತಪಟ್ಟಿದ್ದಾರೆ.

ಈ ಸಂಬಂಧ ಮೃತ ಮಹಿಳೆಯ ತಂದೆ ಶ್ರೀಕಾಂತ ಧನ್ನೂರೆ ನೀಡಿದ ದೂರಿನ ಮೇರೆಗೆ ಧನ್ನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಎಸ್‌ಐಆರ್ ಕಾರ್ಯದಲ್ಲಿನ ಲೋಪ ಸರಿಪಡಿಸಲು ಆಗ್ರಹಿಸಿ ಬಿಜೆಪಿ ಪ್ರತಿಭಟನೆ; ಜಿಲ್ಲಾಧಿಕಾರಿಗೆ ಮನವಿ



**ವಿಜಯಪುರ, ಜು. 7:** ವಿಜಯಪುರ ಮಹಾನಗರದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್ ) ಕಾರ್ಯದಲ್ಲಿನ ಲೋಪಗಳನ್ನು ತಕ್ಷಣ ಸರಿಪಡಿಸಿ, ನಗರದ ಪ್ರಮುಖ ಸ್ಥಳಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಬಿಜೆಪಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಧರಣಿ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಎಸ್‌ಐಆರ್ ಮಹತ್ವದ ಸಾಂವಿಧಾನಿಕ ಪ್ರಕ್ರಿಯೆಯಾಗಿದ್ದು, ಅದರ ಆಶಯವನ್ನು ಬುಡಮೇಲು ಮಾಡುವ ಪ್ರಯತ್ನಗಳು ನಡೆಯುತ್ತಿವೆ ಎಂದು ಆರೋಪಿಸಿದರು. ವಿಜಯಪುರ ಮಹಾನಗರದಲ್ಲಿ ಎಸ್‌ಐಆರ್ ಕಾರ್ಯ ಅತ್ಯಂತ ಅವ್ಯವಸ್ಥೆಯಿಂದ ನಡೆಯುತ್ತಿದ್ದು, ಚುನಾವಣಾ ಆಯೋಗದ ನಿಯಮಾನುಸಾರ ಬಿಎಲ್‌ಒಗಳು ಮನೆ–ಮನೆಗೆ ತೆರಳಿ ಪರಿಶೀಲನೆ ನಡೆಸಬೇಕಾದರೂ, ಹಲವರು ದೇವಸ್ಥಾನ, ಮಸೀದಿ ಹಾಗೂ ಶಾಲೆಗಳಲ್ಲಿ ಕುಳಿತು ಫಾರ್ಮಗಳನ್ನು ವಿತರಿಸುತ್ತಿದ್ದಾರೆ ಎಂದು ದೂರಿದರು.

ಮೇಯರ್ ಎಂ.ಎಸ್. ಕರಡಿ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆ ಸಮರ್ಪಕವಾಗಿ ನಡೆಯದಿದ್ದರೆ ಅರ್ಹ ಮತದಾರರಿಗೆ ತೊಂದರೆಯಾಗಲಿದೆ. ಮತದಾರರ ಮ್ಯಾಪಿಂಗ್ ಕಾರ್ಯವೂ ಅವೈಜ್ಞಾನಿಕವಾಗಿ ಹಾಗೂ ತಪ್ಪಾಗಿ ನಡೆದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಬಿಜೆಪಿ ನಗರ ಘಟಕದ ಅಧ್ಯಕ್ಷ ಸಂದೀಪ ಪಾಟೀಲ ಮಾತನಾಡಿ, ಬಿಎಲ್‌ಒಗಳಿಗೆ ಸಮರ್ಪಕ ತರಬೇತಿ ನೀಡದ ಕಾರಣ ಹಲವು ಲೋಪಗಳು ಉಂಟಾಗುತ್ತಿವೆ. ಈಗಾಗಲೇ ಸರ್ಕಾರಿ ಕರ್ತವ್ಯ ನಿರ್ವಹಿಸುತ್ತಿರುವ ಬಿಎಲ್‌ಒಗಳು ಎಸ್‌ಐಆರ್ ಕಾರ್ಯಕ್ಕಾಗಿ ಸಮಯದ ಅಭಾವವಿದೆ ಎಂದು ಹೇಳುತ್ತಿದ್ದು, ಎಲ್ಲ ಫಾರ್ಮಗಳನ್ನು ಹೊತ್ತು ಮನೆ–ಮನೆಗೆ ತೆರಳಲು ಸಾಧ್ಯವಿಲ್ಲ ಎಂದು ಸಾರ್ವಜನಿಕರನ್ನೇ ತಮ್ಮ ಬಳಿಗೆ ಬರಲು ಸೂಚಿಸುತ್ತಿದ್ದಾರೆ ಎಂದರು. ಹೀಗಾಗಿ ಅವರಿಗೆ ಸಹಾಯಕ ಸಿಬ್ಬಂದಿಯನ್ನು ನೇಮಿಸಬೇಕು ಎಂದು ಒತ್ತಾಯಿಸಿದರು.

ಇಬ್ರಾಹಿಂಪುರ ವಾರ್ಡ್ 21ರ ಶಾಲೆ ಸಂಖ್ಯೆ–6, ಆಲಅಮೀನ್ ಪ್ರದೇಶ ಸೇರಿದಂತೆ 9, 11, 14, 31 ಹಾಗೂ 33ನೇ ವಾರ್ಡಗಳಲ್ಲಿ ಎಸ್‌ಐಆರ್ ಕಾರ್ಯ ಸಮರ್ಪಕವಾಗಿ ನಡೆಯದ ಕಾರಣ ಮತದಾರರಿಗೆ ತೊಂದರೆಯಾಗುತ್ತಿದೆ ಎಂದು ಅವರು ತಿಳಿಸಿದರು. ಸಾರ್ವಜನಿಕರ ಅನುಕೂಲಕ್ಕಾಗಿ ಹಾಗೂ ಪಾರದರ್ಶಕ ಪ್ರಕ್ರಿಯೆಗಾಗಿ ವಿಜಯಪುರ ನಗರದ ಪ್ರಮುಖ ಸ್ಥಳಗಳಲ್ಲಿ ತಕ್ಷಣ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಬೇಕು. ಜೊತೆಗೆ ಬಿಎಲ್‌ಒಗಳು ಕಡ್ಡಾಯವಾಗಿ ಮನೆ–ಮನೆಗೆ ತೆರಳಿ ಕಾರ್ಯನಿರ್ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಯಿತು.

ಧರಣಿಯಲ್ಲಿ ಉಪ ಮೇಯರ್ ಸುಮಿತ್ರಾ ಜಾಧವ, ಡಾ. ಸುರೇಶ ಬಿರಾದಾರ, ಗೋಪಾಲ ಘಟಕಾಂಬಳೆ, ಉಮೇಶ್ ಕಾರಜೋಳ, ಭೀಮಾಶಂಕರ ಹದನೂರ, ಸಂಜಯ ಪಾಟೀಲ ಕನಮಡಿ, ಮಳುಗೌಡ ಪಾಟೀಲ, ಶಿವರುದ್ರ ಬಾಗಲಕೋಟ, ರಾಹುಲ ಜಾಧವ, ರಾಜಶೇಖರ ಮಗಿಮಠ, ಸುನೀತಾ ಒಡೆಯರ, ಬಸವರಾಜ ಬೈಚಬಾಳ, ಹರ್ಷಗೌಡ ವಿಜಯ್ ಜೋಶಿ ಪಾಟೀಲ, ಕೃಷ್ಣ ಗುನ್ನಾಳಕರ, ಶ್ರೀಕಾಂತ ಶಿಂಧೆ, ರಾಜೇಶ ತಾವಸೆ, ವಿನಾಯಕ ದಹಿಂಡಿ, ರವೀಂದ್ರ ಲೋಣಿ, ಮಹೇಶ ಒಡೆಯರ, ಪಾಪುಸಿಂಗ್ ರಜಪೂತ, ಚಿನ್ನು ಚಿನಗುಂಡಿ, ವಿವೇಕ ತಾವರಗೇರಿ, ಸದಾಶಿವ ಭೂಟಾಳೆ, ಸಂಗಮೇಶ ಉಕ್ಕಲಿ, ವಿಜಯ ಹಿರೇಮಠ, ಆನಂದ ಮುಚ್ಚಂಡಿ, ಪ್ರಫುಲ್ ಪವಾರ, ಸಿದ್ದು ಮಲ್ಲಿಕಾರ್ಜುನಮಠ, ಭರತ ಕೋಳಿ, ಸತೀಶ ಗಾಯಕವಾಡ, ಉಮೇಶ್ ವಿರಕರ, ಗೇಸುದರಾಜ ಇನಾಮದಾರ, ಬಸವರಾಜ ಹಳ್ಳಿ, ಗಣೇಶ ರಣದೇವಿ, ಯೋಗೇಶ ಸುಲಾಖೆ, ರವಿ ಕನ್ನೊಳ್ಳಿ, ಗುರುರಾಜ ಜೋಶಿ, ಸಂತೋಷ ಪತ್ತಾರ, ಗಣೇಶ ಉಪ್ಪಾರ, ರವಿ ಬಿರಾದಾರ, ಬಸವರಾಜ ಮಣೂರ, ಶಿವಾನಂದ ರೂಡಗಿ, ವಿನಾಯಕ ಕುಂದನಗಾರ, ಅನಿಲ ಉಪ್ಪಾರ, ಪ್ರಶಾಂತ ಬಿಜಾಪುರ, ಭಾರತಿ ಭೂಯಾರ, ಜಯಶ್ರೀ ಅಫಜಲಪುರ, ಬಸಮ್ಮ ಗುಜರಿ, ರೇಖಾ ಚವ್ಹಾಣ, ಮೀನಾ ಕುಂದನಗಾರ, ಮಂಜುಳಾ ಮುತ್ತಗೀಕರ, ಜಯಶ್ರೀ ಬಿರಾದಾರ ಹಾಗೂ ಭಾರತಿ ಶಿವಣಗಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಜಲ ಕ್ರಾಂತಿಯ ಹರಿಕಾರ ಸಿದ್ದು ನ್ಯಾಮಗೌಡರಿಗೆ ಕೃಷ್ಣಾ ತೀರದಲ್ಲಿ ಜಲ ನಮನ



**ಜಮಖಂಡಿ:**ಜಲ ಕ್ರಾಂತಿಯ ಹರಿಕಾರ, ಬ್ಯಾರೇಜ್ ಹೀರೋ, ರೈತ ನಾಯಕ ದಿವಂಗತ ಸಿದ್ದು ನ್ಯಾಮಗೌಡ ಅವರ ನೇತೃತ್ವದಲ್ಲಿ ಸಾವಿರಾರು ರೈತರ ಶ್ರಮದಾನದ ಮೂಲಕ ಭಾರತದಲ್ಲಿಯೇ ಪ್ರಪ್ರಥಮವಾಗಿ ನಿರ್ಮಾಣವಾದ ಖಾಸಗಿ ಬ್ಯಾರೇಜ್ ಶ್ರಮ ಬಿಂದು ಸಾಗರ (ಸಿದ್ದು ನ್ಯಾಮಗೌಡ ಬ್ಯಾರೇಜ್) ಇಂದು ಮೈದುಂಬಿ ಹರಿಯುತ್ತಿದ್ದು, ರೈತರ ಮುಖದಲ್ಲಿ ಸಂತಸದ ನಗು ಮೂಡಿಸಿದೆ.


ಕಳೆದ ಹಲವು ದಿನಗಳಿಂದ ಸಮರ್ಪಕ ಮಳೆಯಿಲ್ಲದೆ ಬೆಳೆ ಬಿತ್ತನೆಗೆ ತೊಂದರೆ, ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಹಾಗೂ ಕೃಷ್ಣಾ ನದಿಯ ಒಡಲು ಬರಿದಾಗಿದ್ದರಿಂದ ರೈತರಲ್ಲಿ ಆತಂಕ ಮನೆಮಾಡಿತ್ತು. ಆದರೆ ಇದೀಗ ಬ್ಯಾರೇಜ್ ತುಂಬಿ ಧುಮ್ಮಿಕ್ಕಿ ಹರಿಯುತ್ತಿರುವುದು ಕೃಷ್ಣಾ ತೀರದ ರೈತರಿಗೆ ಹೊಸ ಆಶಾಕಿರಣ ಮೂಡಿಸಿದೆ.

ರೈತರ ಬದುಕಿಗಾಗಿ, ಬೆಳೆದ ಬೆಳೆಗಳ ರಕ್ಷಣೆಗಾಗಿ ಹಾಗೂ ಜನ–ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟು ಬ್ಯಾರೇಜ್ ನಿರ್ಮಾಣಕ್ಕೆ ಮುಂದಾಳತ್ವ ವಹಿಸಿದ್ದ ಮಾಜಿ ಕೇಂದ್ರ ಸಚಿವ ದಿವಂಗತ ಸಿದ್ದು ನ್ಯಾಮಗೌಡರನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಜಿಲ್ಲಾ ಯೂತ್ ಕಾಂಗ್ರೆಸ್ ಅಧ್ಯಕ್ಷ ಕುಮಾರ ಆಲಗೂರ ಅವರ ನೇತೃತ್ವದಲ್ಲಿ ಅಭಿಮಾನಿಗಳು ಹಾಗೂ ರೈತರು ಬ್ಯಾರೇಜ್ ಮೇಲೆ ದಿವಂಗತ ಸಿದ್ದು ನ್ಯಾಮಗೌಡ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಕೃಷ್ಣಾ ನದಿಗೆ ಜಲ ನಮನ ಅರ್ಪಿಸಿದರು.

ಈ ಸಂದರ್ಭದಲ್ಲಿ ವಿಶಾಲ್ ತೇಲಿ, ಕಿರಣ್ ಆರ್‌ಪಿಎಸ್, ಹನೀಫ್ ಮುಲ್ಲಾ, ಮಂಜುನಾಥ ತುಪ್ಪದ, ಮಹೇಶ್ ಸುತಾರ್, ಮಲ್ಲಪ್ಪ ಪಾಟೀಲ್ ಸೇರಿದಂತೆ ರೈತ ಮುಖಂಡರು ಹಾಗೂ ಯುವಕರು ಉಪಸ್ಥಿತರಿದ್ದರು.

# ಬಸರಕೋಡದ ಪವಾಡ ಬಸವೇಶ್ವರ ದೇವಸ್ಥಾನದಲ್ಲಿ 1.20 ಕೋಟಿ ಮೌಲ್ಯದ ಬೆಳ್ಳಿ ಪೂಜಾ ಸಾಮಗ್ರಿ ಕಳವು




**ವಿಜಯಪುರ, ಜು. 7:** ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಸುಕ್ಷೇತ್ರ ಬಸರಕೋಡ ಗ್ರಾಮದ ಪ್ರಸಿದ್ಧ ಪವಾಡ ಬಸವೇಶ್ವರ ದೇವಸ್ಥಾನದಲ್ಲಿ ದುಷ್ಕರ್ಮಿಗಳು ಭಾರಿ ಕಳ್ಳತನ ಎಸಗಿದ್ದು, ಅಂದಾಜು 1.20 ಕೋಟಿ ಮೌಲ್ಯದ 60 ಕೆಜಿಗೂ ಅಧಿಕ ಬೆಳ್ಳಿ ಪೂಜಾ ಸಾಮಗ್ರಿಗಳನ್ನು ಕದ್ದೊಯ್ದಿರುವ ಘಟನೆ ಬೆಳಕಿಗೆ ಬಂದಿದೆ.

ದೇವಸ್ಥಾನದ ಸೇವಾಸ್ಥಾನದಲ್ಲಿದ್ದ ಸುಮಾರು 35 ಕೆಜಿ ತೂಕದ ಬೆಳ್ಳಿಯ ಮುಖಕವಚ, ದಿನನಿತ್ಯ ಪೂಜೆಗೆ ಬಳಸಲಾಗುತ್ತಿದ್ದ ಸುಮಾರು 10 ಕೆಜಿ ತೂಕದ ಬೆಳ್ಳಿ ಮೂರ್ತಿ ಸೇರಿದಂತೆ ಒಟ್ಟು 60 ಕೆಜಿಗೂ ಹೆಚ್ಚು ಪ್ರಮಾಣದ ಬೆಳ್ಳಿ ಪೂಜಾ ಸಾಮಗ್ರಿಗಳನ್ನು ಕಳ್ಳರು ಕಳವು ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಈ ಕಳ್ಳತನದಿಂದ ಬಸರಕೋಡ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಭಕ್ತರಲ್ಲಿ ತೀವ್ರ ಆತಂಕ ಮತ್ತು ಆಕ್ರೋಶ ವ್ಯಕ್ತವಾಗಿದೆ. ದೇವಸ್ಥಾನಕ್ಕೆ ಭಕ್ತರು ಅಪಾರ ಭಕ್ತಿಭಾವದಿಂದ ಸಮರ್ಪಿಸಿದ್ದ ಅಮೂಲ್ಯ ಬೆಳ್ಳಿ ಸಾಮಗ್ರಿಗಳು ಕಳವಾಗಿರುವುದು ಗ್ರಾಮಸ್ಥರಲ್ಲಿ ಬೇಸರ ಉಂಟುಮಾಡಿದೆ. ಘಟನಾ ಸ್ಥಳಕ್ಕೆ ಮುದ್ದೇಬಿಹಾಳ ಪೊಲೀಸ್ ಠಾಣೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಕಳ್ಳರ ಪತ್ತೆಗೆ ತನಿಖೆ ಆರಂಭಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE